ಸಂಪುಟ : 9 ಸಂಚಿಕೆ 117 ಪುಟ : 4 ಬೆಲೆ: 3.00 ಮಂಗಳವಾರ ಜೂನ್ 11 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 117 Pages : 4 Price : 3.00 Tuesady June 11 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಜಿಲ್ಲಾ ಟಾಸ್ಕ್‌ಫೋರ್ಸ್ (ಗಣಿ) ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಸೂಚನೆ

# ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿದರೆ ಗಡಿಪಾರು ಮಾಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಗಣಿಗಾರಿಕೆಯನ್ನು ಸರ್ಕಾರದ ನಿಯಮಾನುಸಾರ ಸರಿಯಾಗಿ ನಿರ್ವಹಿಸಬೇಕು. ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿ ನಿರಂತರವಾಗಿ ನಿಯಮಗಳನ್ನು ಉಲ್ಲಂಘಿಸುವವರನ್ನು ಗುರುತಿಸಿ ಗಡಿಪಾರು ಶಿಕ್ಷೆಗೆ ಒಳಪಡಿಸಲು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಜಿಲ್ಲಾ ಟಾಸ್ಕ್‌ಫೋರ್ಸ್ (ಗಣಿ) ಸಮಿತಿ, ಜಿಲ್ಲಾ ಮರಳು ಉಸ್ತುವಾರಿ ಸಮಿತಿ ಹಾಗೂ ಕರ್ನಾಟಕ ಕಲ್ಲುಪುಡಿ ಮಾಡುವ ಘಟಕಗಳ ನಿಯಂತ್ರಣ ಮತ್ತು ಲೈಸನ್ಸಿಂಗ್ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಂದಾಯ, ಅರಣ್ಯ, ಗಣಿ ಮತ್ತು ಭೂ ವಿಜ್ಞಾನ ಇಲಾಖೆ, ಸಾರಿಗೆ ಇಲಾಖೆ, ಸಣ್ಣ ನೀರಾವರಿ ಇಲಾಖೆ ಹಾಗೂ ಪೊಲೀಸ್ ಇಲಾಖೆ ಅಧಿಕಾರಿಗಳು ತಮಗಿರುವ ಅಧಿಕಾರವನ್ನು ಚಲಾಯಿಸುವ ಮೂಲಕ ಅಕ್ರಮ ಮರಳು, ಕಲ್ಲು ಗಣಿಗಾರಿಕೆ ತಡೆಗೆ ಮುಂದಾಗಬೇಕು. ಈ ಮೂಲಕ ಸಾರ್ವಜನಿಕ ಆಸ್ತಿ ಸಂರಕ್ಷಣೆ ಮಾಡಬೇಕು ಹಾಗೂ ಸಾರ್ವಜನಿಕರ ವಿಶ್ವಾಸಾರ್ಹತೆ ಉಳಿಸಿಕೊಳ್ಳಬೇಕು. ಅಕ್ರಮ ಗಣಿಗಾರಿಕೆ ಕುರಿತು ಮಾಧ್ಯಮದಲ್ಲಿ ಪ್ರಕಟವಾಗುವ ಸುದ್ದಿಗಳ ಕುರಿತು ಸಂಬಂಧಿತ ಇಲಾಖೆಯ ಅಧಿಕಾರಿಗಳು ನೈಜತೆ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮಗಳನ್ನು ವಹಿಸುವಂತೆ ಡಿಸಿ ವೈಶಾಲಿ ಎಂ.ಎಲ್ ಹೇಳಿದರು.

ತಾಲೂಕಾ ತಹಸೀಲ್ದಾರರು ತಮಗಿರುವ ದಂಡಾಧಿಕಾರಿ ಅಧಿಕಾರವನ್ನು ಬಳಸಿಕೊಂಡು ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿದವರನ್ನು ಶಿಕ್ಷೆಗೆ ಗುರಿಪಡಿಸಬೇಕು. ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ಅಕ್ರಮ ಗಣಿಗಾರಿಕೆ ನಡೆಸುವವರಿಗೆ ಅಧಿಕ ಪ್ರಮಾಣದ ದಂಡ ವಿಧಿಸಲು ಅವಕಾಶವಿದ್ದು, ಅದನ್ನು ಚಲಾಯಿಸುವ ಮೂಲಕ ಕಾನೂನು ಉಲ್ಲಂಘನೆ ಮಾಡುವವರನ್ನು ಸರಿದಾರಿಗೆ ತರಬೇಕು. ದಂಡ ವಿಧಿಸಿದ ನಂತರ ಅದನ್ನು ಸಂಬಂಧಿಸಿದ ವ್ಯಕ್ತಿಯ ಖಾತೆಯಲ್ಲಿ ಭೋಜಾ ದಾಖಲಿಸಬೇಕು. ಪದೇ ಪದೇ ತಪ್ಪೆಸಗಿದಲ್ಲಿ ಅವರನ್ನು ಗಡಿಪಾರಿಗೆ ಶಿಕ್ಷೆಗೆ ಒಳಪಡಿಸಲು ಶಿಸ್ತು ಕ್ರಮ ಕೈಗೊಳ್ಳಲು ಮುಂದಾಗುವಂತೆ ಸೂಚಿಸಿದರು.



ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಸರ್ಕಾರದ ಮಾರ್ಗಸೂಚಿಗಳನ್ವಯ ಗಣಿಗಾರಿಕೆ ಮಾಡುವವರಿಗೆ ಅವಕಾಶ ನೀಡಬೇಕು. ಮಾರ್ಗಸೂಚಿ ಉಲ್ಲಂಘಿಸಿದಲ್ಲಿ ಶಿಸ್ತು ಕ್ರಮ ತಪ್ಪಿದ್ದಲ್ಲ ಎಂಬುದನ್ನು ಮನವರಿಕೆ ಮಾಡಿಸುವ ಕಾರ್ಯ ಇಲಾಖಾಧಿಕಾರಿಗಳಿಂದ ಆಗಬೇಕು ಎಂದರು.

ಸಭೆಯಲ್ಲಿ ಹೊಳೆ, ನದಿಗಳ ಪಾತ್ರದಲ್ಲಿನ ಗುರುತಿಸಿರುವ ಮರಳು ಬ್ಲಾಕ್‌ಗಳನ್ನು ವಿಲೇವಾರಿ ಮಾಡುವ ಕುರಿತು, ಕಪ್ಪತಗುಡ್ಡ ವನ್ಯ ಜೀವಿ ಧಾಮದಿಂದ ಒಂದು ಕಿ.ಮೀ ವ್ಯಾಪ್ತಿಯೊಳಗೆ ಬರುವ ಕ್ರಶರ್ ಘಟಕಗಳ ಲೈಸನ್ಸ್‌ಗಳನ್ನು ನಿಲಂಬನೆಗೊಳಿಸುವ ಕುರಿತು, ಕ್ರಶರ್ ಘಟಕಗಳ ಹೊಸದಾಗಿ ಮಂಜೂರು ಮಾಡುವ ಕುರಿತು, ಕಪ್ಪತಗುಡ್ಡ ವನ್ಯಜೀವಿ ಧಾಮದಿಂದ ಹತ್ತು ಕಿ.ಮೀ ವ್ಯಾಪ್ತಿಯಲ್ಲಿರುವ ಕಟ್ಟಡ ಕಲ್ಲು, ಮರಳು, ಮಣ್ಣು ಗಣಿಗಾರಿಕೆ ಮತ್ತು ಕ್ರಶರ್ ಘಟಕಗಳ ಚಟುವಟಿಕೆಗಳನ್ನು ನಿಷೇಧಿಸುವ ಕುರಿತು ಹಾಗೂ ಪರಿಸರ ಸೂಕ್ಷ್ಮ ವಲಯದ ವ್ಯಾಪ್ತಿಯೊಳಗೆ ಕಲ್ಲು ಗಣಿ ಪರವಾನಿಗೆ ಹೊಸ ಅರ್ಜಿ ಕುರಿತಂತೆ ಚರ್ಚಿಸಲಾಯಿತು.

ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿದವರ ಮೇಲೆ ನಿರಂತರ ನಿಗಾ ವಹಿಸಬೇಕು. ವಾಹನಗಳ ತಪಾಸಣೆಯನ್ನು ನಿಯಮಿತವಾಗಿ ಸಾರಿಗೆ ಅಧಿಕಾರಿಗಳು ಮಾಡಬೇಕು. ಓವರ್ ಲೋಡ್ ವಾಹನಗಳಿಗೆ ನಿಯಮಾನುಸಾರ ದಂಡ ವಿಧಿಸುವ ಮೂಲಕ ಪ್ರಕರಣ ದಾಖಲಿಸಬೇಕು. ಇಲಾಖಾಧಿಕಾರಿಗಳು ಜಂಟಿ ಸಮೀಕ್ಷೆ, ಸ್ಥಳ ಪರಿಶೀಲನೆಗೆ ತೆರಳುವ ಸಂದರ್ಭದಲ್ಲಿ ಪೊಲೀಸ್ ಇಲಾಖಾಧಿಕಾರಿಗಳ ಸಹಕಾರದೊಂದಿಗೆ ಕಾರ್ಯನಿರ್ವಹಿಸಿ.

– ಬಿ.ಎಸ್. ನೇಮಗೌಡ.
ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ.

ಸಭೆಯಲ್ಲಿ ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಹಿರಿಯ ಭೂ ವಿಜ್ಞಾನಿ ಚಿದಂಬರಂ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ತಹಸೀಲ್ದಾರರು ಹಾಜರಿದ್ದರು.

# ನಾಳೆ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಶಿರಹಟ್ಟಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಜೂನ್ 12ರ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.


ಸದರಿ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕುಡಿಯುವ ನೀರಿನ ಸ್ಥಾವರಗಳು, ಕೈಗಾರಿಕಾ, ಸೋಲಾರ್ ಐ.ಪಿ.ಪಿ, ಮೆ. ಬಿ.ಪಿ.ಸಿ.ಎಲ್ 1 & 2ರ ಗಾಳಿಯಂತ್ರ ಘಟಕಕ್ಕೆ ಮತ್ತು ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಕ್ಷರಣ, ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಪ್ರಕಟಣೆ ತಿಳಿಸಿದೆ.

# ಆರಾಧನಾ ಸಮಿತಿಗೆ ನಾಮನಿರ್ದೇಶಿತ ಸದಸ್ಯರಾಗಿ ವೀಣಾ ಕಟ್ನಳ್ಳಿ ಸೇರಿ ನಾಲ್ವರ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರ ಶಿಫಾರಸ್ಸಿನ ಮೇರೆಗೆ ಗದಗ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ವೀಣಾ ಕಟ್ನಳ್ಳಿ ಸೇರಿದಂತೆ ನಾಲ್ವರನ್ನು ಆರಾಧನಾ ಸಮಿತಿಗೆ ನಾಮನಿರ್ದೇಶಿತ ಸದಸ್ಯರನ್ನಾಗಿ ಆಯ್ಕೆ ಮಾಡಿ ಕಂದಾಯ ಇಲಾಖೆ ಆದೇಶ ಹೊರಡಿಸಿದೆ.

ಮಹಿಳಾ ವಿಭಾಗದಲ್ಲಿ ವೀಣಾ ಕಟ್ನಳ್ಳಿ, ಸಾಮಾನ್ಯ ವಿಭಾಗದಲ್ಲಿ ರಾಮಕೃಷ್ಣ ನರಸಿಂಹರಾವ್ ಕಮಿತಕರ, ಪರಿಶಿಷ್ಟ ಜಾತಿ ವಿಭಾಗದಲ್ಲಿ ಮಹಾಲಿಂಗಪೂರದ ಶ್ರೀನಿವಾಸ್ ನಾಯಕ, ಪರಿಶಿಷ್ಟ ಪಂಗಡ ವಿಭಾಗದಲ್ಲಿ ನಾಗಾವಿಯ ಶಿವಾನಂದ ತಳವಾರ ಅವರು ಗದಗ



ವಿಧಾನಸಭಾ ಕ್ಷೇತ್ರದ ಆರಾಧನಾ ಸಮಿತಿಗೆ ನಾಮನಿರ್ದೇಶಿತ ಸದಸ್ಯರಾಗಿ ಆಯ್ಕೆಯಾಗಿದ್ದಾರೆ.

ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರು ಆರಾಧನಾ ಸಮಿತಿಗೆ ನಾಲ್ವರನ್ನು ನಾಮನಿರ್ದೇಶಿತ ಸದಸ್ಯರನ್ನಾಗಿ ಮಾಡುವಂತೆ ಶಿಫಾರಸು ನೀಡಿದ್ದರ ಹಿನ್ನೆಲೆಯಲ್ಲಿ ತಹಸೀಲಾರ ಶ್ರೀನಿವಾಸಮೂರ್ತಿ ಕುಲಕರ್ಣಿ ಆದೇಶ ಹೊರಡಿಸಿದ್ದಾರೆ.

ಮಾಜಿ ಶಾಸಕ ಡಿ.ಆರ್. ಪಾಟೀಲ, ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ನೀಲಮ್ಮ ಬೋಳನವರ, ಜಿ.ಪಂ ಮಾಜಿ ಅಧ್ಯಕ್ಷೆ ಸುಜಾತಾ ದೊಡ್ಡಮನಿ, ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯೆ ಜಾನಕಿ ಮಲ್ಲಾಪೂರ, ಕೆಪಿಸಿಸಿ ಮಹಿಳಾ ಪ್ರಧಾನ ಕಾರ್ಯದರ್ಶಿ ಮೀನಾಕ್ಷಿ ಬೆನಕಣ್ಣವರ, ಕುಸುಮಾ ಬೆಳಗಟ್ಟಿ, ನಗರಸಭೆ ಮಾಜಿ ಅಧ್ಯಕ್ಷೆ ರುದ್ರಮ್ಮ ಕೆರಕಲಮಟ್ಟಿ, ಮುಖಂಡರಾದ ಲೀಲಾವತಿ ಸಂಕಣ್ಣವರ, ಶ್ರುತಿ ಕಮತರ, ವಾಣಿ ಹಿರೇಮಠ ಹಾಗೂ ಜಿಲ್ಲಾ ಮಹಿಳಾ ಕಾಂಗ್ರೆಸ್ಸಿನ ಮುಖಂಡರು ಆಯ್ಕೆಯಾದ ಸದಸ್ಯರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

# ಪಂಚವಟಿ ವನಮಹೋತ್ಸವ ಕಾರ್ಯಕ್ರಮ



■ ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ಪರಿಸರ ದಿನಾಚರಣೆಯ ನಿಮಿತ್ತ ಪಂಚವಟಿ ವನಮಹೋತ್ಸವ ಕಾರ್ಯಕ್ರಮವನ್ನು ಜಿಲ್ಲಾಡಳಿತ ಭವನದ ಆವರಣದಲ್ಲಿ ಇತ್ತೀಚೆಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಪಂಚವಟಿ ಸಸ್ಯಗಳನ್ನು ನೆಡುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಪ್ರತಿಯೊಬ್ಬರೂ ಮನೆಯ ಅಂಗಳದಲ್ಲಿ ಸಸಿ ನೆಟ್ಟು ಸಂರಕ್ಷಿಸಬೇಕು. ಈ ದಿಸೆಯಲ್ಲಿ ಗಿಡಮರ ಉಳಿಸಿ ಪರಿಸರ ಸಂರಕ್ಷಣೆ ಮಾಡಬೇಕು. ಗಿಡಮರಗಳನ್ನು, ಪರಿಸರವನ್ನು ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ. ಎಂ.ಎಸ್. ಉಪ್ಪಿನ ಮಾತನಾಡಿ, ಪ್ರತಿಯೊಬ್ಬರೂ ಆರೋಗ್ಯಪೂರ್ಣ ಜೀವನ ನಡೆಸಲು ಗಿಡ-ಮರಗಳನ್ನು ಬೆಳೆಸೋಣ ಎಂದರು.

ನ್ಯಾಶನಲ್ ಇಂಟಿಗ್ರೇಟೆಡ್ ಮೆಡಿಕಲ್ ಅಸೋಸಿಯೇಶನ್ ಗೌರವ ಅಧ್ಯಕ್ಷ ಡಾ. ಎಸ್. ಆರ್.ಹಿರೇಮಠ ಮಾತನಾಡಿ, ಪಂಚವಟಿಯು ಪೌರಾಣಿಕ ಹಿನ್ನೆಲೆಯುಳ್ಳ ಔಷಧ ಮರಗಳಾಗಿವೆ ಎಂದರು. ಡಾ.ಶಿವಶಂಕರ ಪೂಜಾರ ಮಾತನಾಡಿ, ಬೇಸಿಗೆಯಲ್ಲಿ ಕೂಲರ್‌ಗೆ ಹಾಕಿದಷ್ಟು ನೀರನ್ನು ಗಿಡಕ್ಕೆ ಹಾಕಿದರೆ ವಾತಾವರಣ ಇಷ್ಟೊಂದು ಬಿಸಿಯಾಗುತ್ತಿರಲಿಲ್ಲ. ಇನ್ನಾದರೂ ಗಿಡಮರಗಳನ್ನು ಬೆಳೆಸೋಣ ಎಂದರು.

ಈ ಸಂದರ್ಭದಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಡಾ. ವೆಂಕಟೇಶ ಪೂಜಾರ, ಡಾ. ಪಲ್ಲೇದ, ಡಾ.ದೊಡ್ಡಮನಿ, ಡಾ. ರವಿ ಮೂಲಿಮನಿ, ನ್ಯಾಶನಲ್ ಇಂಟಿಗ್ರೇಟೆಡ್ ಮೆಡಿಕಲ್ ಅಸೋಸಿಯೇಶನ್ ಸದಸ್ಯರು ಹಾಜರಿದ್ದರು.

ನ್ಯಾಶನಲ್ ಇಂಟಿಗ್ರೇಟೆಡ್ ಮೆಡಿಕಲ್ ಅಸೋಸಿಯೇಶನ್ ಜಿಲ್ಲಾ ಘಟಕದ ಮಹಿಳಾ ಅಧ್ಯಕ್ಷರಾದ ಡಾ.ರಾಜೇಶ್ವರ ಹಿರೇಮಠ ಕಾರ್ಯಕ್ರಮ ನಿರೂಪಿಸಿದರು.

### ಅಧಿಕಾರಿಗಳ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್

# ಫ್ರೂಟ್ಸ್ ಐಡಿ ಅಭಿಯಾನ ಮಾಡಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯಲ್ಲಿ ಉತ್ತಮ ಮಳೆ ಆಗಿದ್ದು, ರೈತರ ಬೇಡಿಕೆಗೆ ಅನುಗುಣವಾಗಿ ಬೀಜ, ರಸಗೊಬ್ಬರ ವಿತರಿಸಬೇಕು. ಸರಕಾರದಿಂದ ಕೃಷಿ ಸಂಬಂಧಿತ ಎಲ್ಲ ಸೌಲಭ್ಯಗಳನ್ನು ಪಡೆಯಲು ಪ್ರತಿ ರೈತ ಪ್ರೂಟ್ ಐಡಿ ಹೊಂದುವುದು ಕಡ್ಡಾಯವಾಗಿದ್ದು, ರೈತರಲ್ಲಿ ಜಾಗೃತಿ ಮೂಡಿಸಲು ಮತ್ತು ಪ್ರೂಟ್ ಐಡಿ ಹೊಂದಲು ಜಿಲ್ಲೆಯಾದ್ಯಂತ ಅಭಿಯಾನ ಹಮ್ಮಿಕೊಳ್ಳಬೇಕೆಂದು ಕಾರ್ಮಿಕ ಇಲಾಖೆ ಸಚಿವರೂ ಆಗಿರುವ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದರು.




ಅವರು ಸೋಮವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕೃಷಿ ಹಾಗೂ ಇತರ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ಜರುಗಿಸಿ ಮಾತನಾಡಿದರು.

ಶಾಸಕ ಎನ್.ಎಚ್. ಕೋನರಡ್ಡಿ ಮಾತನಾಡಿ, ರೈತರಿಗೆ ಬೀಜ ದರ ಹೆಚ್ಚಳ ಬಗ್ಗೆ ತಿಳುವಳಿಕೆ ನೀಡಬೇಕು ಮತ್ತು ಹೊಸ ತಳಿ ಬೀಜಗಳನ್ನು ರೈತರಿಗೆ ಪರಿಚಯಿಸಿ, ವಿತರಿಸಲು ಕ್ರಮ ಕೈಗೊಳ್ಳಬೇಕು. ರೈತ ಸಂಪರ್ಕ ಕೇಂದ್ರದ ಸಿಬ್ಬಂದಿಗಳಿಗೆ ರೈತರ ಫ್ರೂಟ್ಸ್ ಐಡಿ ಸೃಜಿಸಲು ಸೂಕ್ತ ನಿರ್ದೇಶನ ನೀಡಬೇಕೆಂದು ಕೃಷಿ ಅಧಿಕಾರಿಗಳಿಗೆ ತಿಳಿಸಿದರು.

ಸರಕಾರದ ವಿವಿಧ ಸೌಲಭ್ಯಗಳನ್ನು ಪಡೆಯಲು ಪ್ರತಿ ರೈತ ಫ್ರೂಟ್ಸ್ ಐಡಿ ಹೊಂದುವುದು ಅಗತ್ಯವಾಗಿದೆ. ಜಿಲ್ಲೆಯಲ್ಲಿ ಈಗಾಗಲೇ ಶೇ. 76ರಷ್ಟು ರೈತರು ಫ್ರೂಟ್ಸ್ ಐಡಿ ಹೊಂದಿದ್ದಾರೆ. ಉಳಿದ ರೈತರು ಫ್ರೂಟ್ಸ್ ಐಡಿ ಹೊಂದುವಂತೆ ಜಾಗೃತಿ ಮೂಡಿಸಿ, ಪ್ರಗತಿ ಸಾಧಿಸಲು ರೈತರ ಜಾಗೃತಿಗಾಗಿ ಅಭಿಯಾನ ಹಮ್ಮಿಕೊಳ್ಳಬೇಕೆಂದು ಸಚಿವ ಸಂತೋಷ ಲಾಡ್ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಜಿಲ್ಲೆಯ 14 ರೈತ ಸಂಪರ್ಕ ಕೇಂದ್ರಗಳ ಜೊತೆಗೆ ಹೆಚ್ಚುವರಿ ಕೇಂದ್ರಗಳನ್ನು ತೆರೆದು ರೈತರಿಗೆ ಸಕಾಲದಲ್ಲಿ ಬೀಜ, ಗೊಬ್ಬರ ವಿತರಿಸಲು ಕ್ರಮಕೈಗೊಳ್ಳಲಾಗಿದೆ.

ಜಿಲ್ಲೆಯ ಪ್ರತಿ ಗ್ರಾಮಗಳಲ್ಲಿ ಕಂದಾಯ ಇಲಾಖೆಯ ಗ್ರಾಮ ಆಡಳಿತ ಅಧಿಕಾರಿಗಳ ಮೂಲಕ ಪ್ರತಿ ರೈತರ ಆರ್.ಟಿ.ಸಿಗೆ ಆಧಾರ್ ಜೋಡಣೆ ಕಾರ್ಯ ನಡೆದಿದೆ. ಇದರೊಂದಿಗೆ ರೈತರು ಫ್ರೂಟ್ಸ್ ಐಡಿ ಹೊಂದುವಂತೆ ತಿಳುವಳಿಕೆ ನೀಡಿ, ಕ್ರಮವಹಿಸಲಾಗುವುದು ಎಂದು ತಿಳಿಸಿದರು.

ಮಹಾನಗರ ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ, ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ.ಗೋಪಾಲ ಬ್ಯಾಕೋಡ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ವೇದಿಕೆಯಲ್ಲಿದ್ದರು.

### ತುಪ್ಪರಿ ಹಳ್ಳ, ಬೆಣ್ಣೆ ಹಳ್ಳ ಪ್ರವಾಹ ಹಾನಿ ಪ್ರದೇಶ ವೀಕ್ಷಿಸಿದ ಸಚಿವ ಸಂತೋಷ ಲಾಡ್ । ಗುಣಮಟ್ಟದ ಕಾಮಗಾರಿಗೆ ತಾಕೀತು

# ಮಳೆಗಾಲದ ನಂತರ ದುರಸ್ತಿ ಕಾರ್ಯ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

2019ರಲ್ಲಿ ಸರಕಾರ ಒದಗಿಸಿದ ಅನುದಾನದಲ್ಲಿ ಹೂಳು ತೆಗೆಯುವುದು, ಬದು ಎತ್ತರಿಸುವುದು ಹಾಗೂ ತಡೆಗೋಡೆ ಕಾಮಗಾರಿಗಳನ್ನು ಇಲಾಖೆ ಅಧಿಕಾರಿಗಳು ಕೈಗೊಂಡಿದ್ದಾರೆ. ಆದರೂ ಸಹ ನೀರು ಗ್ರಾಮಗಳಿಗೆ ಹಾಗೂ ರೈತರ ಜಮೀನುಗಳಿಗೆ ನುಗ್ಗಿ ಸಾಕಷ್ಟು ಹಾನಿಯಾಗುತ್ತಿದೆ. ವೈಜ್ಞಾನಿಕವಾಗಿ ಮೇಲ್ಸೇತುವೆ ಎತ್ತರಿಸುವುದು ಹಾಗೂ ಹಲವೆಡೆ ಬ್ಯಾರೇಜ್‌ಗಳನ್ನು ನಿರ್ಮಿಸಿ ಮುಂದಿನ ದಿನಗಳಲ್ಲಿ ಜನರಿಗೆ, ರೈತರಿಗೆ ತೊಂದರೆ ಆಗದಂತೆ ಶಾಸಕರು ಹಾಗೂ ಜಿಲ್ಲಾಧಿಕಾರಿಗಳೊಂದಿಗೆ ಸಭೆ ನಡೆಸಿ ಕ್ರಮಕೈಗೊಳ್ಳಲಾಗುವುದು. ಮಳೆಗಾಲದ ನಂತರ ದುರಸ್ತಿ ಕಾರ್ಯ ಕೈಗೊಳ್ಳುವುದಾಗಿ ಸಚಿವ ಸಂತೋಷ ಲಾಡ್ ತಿಳಿಸಿದರು.



ಕಳೆದ ನಾಲ್ಕೈದು ದಿನಗಳಿಂದ ಸುರಿದ ಮಳೆಯಿಂದಾಗಿ ನವಲಗುಂದ ತಾಲೂಕಿನಲ್ಲಿ ತುಪ್ಪರಿ ಹಳ್ಳ ಹಾಗೂ ಬೆಣ್ಣಿ ಹಳ್ಳದ ಪ್ರವಾಹದಿಂದ ಹಾನಿಗೊಳಗಾದ ಗ್ರಾಮಗಳಾದ ಹನಸಿ, ಶಿರಕೋಳ, ಬಳ್ಳೂರ ಗ್ರಾಮಗಳಿಗೆ ಸಚಿವರಾದ ಸಂತೋಷ ಲಾಡ್, ಶಾಸಕರಾದ ಎನ್.ಎಚ್. ಕೋನರಡ್ಡಿ, ಜಿಲ್ಲಾಧಿಕಾರಿ ದಿವ್ಯ ಪ್ರಭು ಭೇಟಿ ನೀಡಿ ಅಲ್ಲಿನ ಸ್ಥಿತಿಗತಿ ಪರಿಶೀಲಿಸಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ವೈಜ್ಞಾನಿಕ ಹಾಗೂ ಗುಣಮಟ್ಟದ ಕಾಮಗಾರಿ ನಿರ್ಮಾಣಕ್ಕೆ ಗುತ್ತಿಗೆದಾರರಿಗೆ, ಅಧಿಕಾರಿಗಳಿಗೆ ತಾಕೀತು ಮಾಡಲಾಗುವುದು. ತಾಂತ್ರಿಕತೆ ಅರಿತು ಟೆಂಡರ್ ಕರೆಯುವುದು ಸೂಕ್ತವೆಂದರಲ್ಲದೆ, ತುಪ್ಪರಿಹಳ್ಳ 65 ಹಾಗೂ ಬೆಣ್ಣಿಹಳ್ಳ 140 ಕಿ.ಮೀ. ಹರಿದಿದೆ. ಹಳ್ಳದಗುಂಟ ಹಾನಿ ಮಾಡುತ್ತಿವೆ. ಈ ಉಭಯ ಹಳ್ಳಗಳಲ್ಲಿ ವ್ಯರ್ಥವಾಗಿ ಹರಿಯುವ ನೀರನ್ನು ಸಂಗ್ರಹಿಸಿ ಸದ್ಬಳಕೆಗೆ ಯೋಜನೆ ರೂಪಿಸುವ ಬಗ್ಗೆ ಚಿಂತಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.


ಬಾಗಲಕೋಟಿ, ಹಾವೇರಿ, ಧಾರವಾಡ ಜಿಲ್ಲೆಗಳು ಒಳಗೊಳ್ಳುವ ಈ ಬೆಣ್ಣೆಹಳ್ಳ ಜಲ ಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ ನೀರಾವರಿಗೆ ಒಳಪಡಿಸುವಂತೆ ಘೋಷಿಸಿದ್ದು, ಎಸ್‌ಡಿಆರ್‌ಎಫ್‌ದಲ್ಲಿ 1,600 ಕೋಟಿಗೆ ಡಿಪಿಆರ್ ಆಗಿದೆ ಎಂದರು. ಅಲ್ಲದೇ, ನೀರು ಸಂಗ್ರಹಿಸಲು ಜಾಗದ ಕೊರತೆ ಇರುವ ಕಾರಣಕ್ಕೆ ಕೆರೆಗಳಿಗೆ ಈ ನೀರನ್ನು ತುಂಬಿಸಿ, ಪಂಪ್ ಮಾಡಿ ಬಳಸುವ ಯೋಜನೆ ರೂಪಿಸುವ ಕಾರ್ಯ ನಡೆದಿದೆ. ಇದು ಮೂರು ಹಂತದಲ್ಲಿ ಕಾರ್ಯ ಜರುಗಲಿದೆ ಎಂದು ತಿಳಿಸಿದರು. ಬೆಣ್ಣೆಹಳ್ಳದ ಜಮೀನು ಹಾನಿ ಸರ್ವೆ ಆಗಿಲ್ಲ. ಸದ್ಯ ಮಳೆಗಾಲ ಇದೆ. ಮಳೆಗಾಲದ ಬಳಿಕ ಸರ್ವೆ ಕಾರ್ಯ ನಡೆಯಲಿದೆ. ಬೆಣ್ಣೆಹಳ್ಳ ಅಗಲೀಕರಣ ಮಾಡಲು ಹಳ್ಳದ ಅಂಚಿನ ರೈತರು ಕೂಡ ಸಹಕಾರ ನೀಡಬೇಕಿದೆ ಎಂದು ಶಾಸಕ ಎನ್.ಎಚ್. ಕೋನರೆಡ್ಡಿ ತಿಳಿಸಿದರು.

ಇನಾಮಹೊಂಗಲ್, ಹನಸಿ ಹಾಗೂ ಶಿರಕೋಳ, ಬಳ್ಳೂರ ಗ್ರಾಮಗಳಲ್ಲಿ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳಿಗೆ ಭೇಟಿ ನೀಡಿದರು. ಹನಸಿ ಗ್ರಾಮದಲ್ಲಿ ಲಲಿತಾ ಗಂಗಪ್ಪ ಹೆಬ್ಬಳ್ಳಿ, ಗುರಪಾದಪ್ಪ ರುದ್ರಪ್ಪ ಆಯಟ್ಟಿ ಹಾಗೂ ಬಸವರಾಜ ಚಂದ್ರಶೇಖರ ಇಂಡಿ ಇವರ ಮನೆಗಳು ಹಾನಿಯನ್ನು ಪರಿಶೀಲಿಸಿ ಶೀಘ್ರವೇ ಮನೆಹಾನಿ ಪರಿಹಾರ ಒದಗಿಸಲಾಗುವುದೆಂದು ಭರವಸೆ ನೀಡಿದರು.

ಹನಸಿ ಹಾಗೂ ಶಿರಕೋಳ ಮಧ್ಯದಲ್ಲಿ ತುಪ್ಪರಿ ಹಳ್ಳ ಹರಿವಿನ ತೀವ್ರತೆ ಹಾಗೂ ಹಾನಿಗೀಡಾದ ಪ್ರದೇಶವನ್ನು ಸಚಿವರು ವೀಕ್ಷಿಸಿದರು. ಬಳ್ಳೂರ ಗ್ರಾಮದಲ್ಲಿ ಮಳೆಹಾನಿಗೊಳಗಾದ ವಾಸುದೇವ ಬೆಳ್ಳಿಕಟ್ಟಿ ಹಾಗೂ ರೇಣ್ಣಪ್ಪ ಕುಂಬಾರ ಮನೆಗಳಿಗೆ ಭೇಟಿ ನೀಡಿದರು. ತಿರ್ಲಾಪುರ ಗ್ರಾಮದಿಂದ ಅಳಗವಾಡಿ ಗ್ರಾಮದ ಮದ್ಯ ತುಪ್ಪರಿ ಹಳ್ಳವು ಬೆಣ್ಣೆ ಹಳಕ್ಕೆ ಕೂಡುವ ಸ್ಥಳವನ್ನು ಸೇತುವೆ ಮೇಲಿಂದ ವೀಕ್ಷಿಸಿದರು.

ಇದೇ ಸಂದರ್ಭದಲ್ಲಿ ನವಲಗುಂದ ಶಾಸಕ ಎನ್.ಎಚ್. ಕೋನರೆಡ್ಡಿ ಮಾತನಾಡಿ, ತುಪ್ಪರಿಹಳ್ಳಕ್ಕೆ 315 ಕೋಟಿ ರೂ. ಮಂಜೂರಾಗಿದೆ. ಮೊದಲ ಹಂತದಲ್ಲಿ 150 ಕೋಟಿ ರೂ ಟೆಂಡರ್ ಆಗಿದ್ದು, ದ್ವಿತೀಯ ಹಂತದಲ್ಲಿ 110 ಕೋಟಿ ರೂ ಟೆಂಡರ್ ಆಗಬೇಕಿದೆ ಎಂದರು.

ಉಪ್ಪಿನಬೆಟಗೇರಿಯಿಂದ ಪ್ರಾರಂಭವಾಗುವ ಬೆಣ್ಣೆಹಳ್ಳ ನವಲಗುಂದವರೆಗೆ ಹರಿಯಲಿದೆ. ಈ ನೀರು ನೀರಾವರಿ ಬಳಕೆಗೆ ಯೋಜನೆ ರೂಪಿಸಲಿದೆ. ಈ ಬಗ್ಗೆ ವಿಸ್ತೃತ ಯೋಜನಾ ವರದಿ ತಯಾರಿಸುವ ಪ್ರಕ್ರಿಯೆ ನಡೆದಿದೆ ಎಂದು ತಿಳಿಸಿದರು.



## ಸಂಪಾದಕೀಯ

# ಗ್ಯಾರಂಟಿ ನಂಬಿ ಎಡವಿದ ಕಾಂಗ್ರೆಸ್

ಕೇಂದ್ರದಲ್ಲಿ ನರೇಂದ್ರ ಮೋದಿ ನೇತೃತ್ವದ ಸರಕಾರ ರಚನೆಯ ಕಸರತ್ತು ನಡೆದಿದ್ದರೆ, ರಾಜ್ಯದಲ್ಲಿ ಸೋಲಿನ ಪರಾಮರ್ಶೆ ನಡೆಯುತ್ತಿದೆ. ಅದರಲ್ಲೂ ಜನಪ್ರಿಯ ಗ್ಯಾರಂಟಿ ಕಾರ್ಯಕ್ರಮಗಳನ್ನು ಕೊಟ್ಟರೂ ಜನ ಕೈ ಹಿಡಿಯದಿರುವ ಬಗ್ಗೆ ಸ್ವತಃ ಕಾಂಗ್ರೆಸ್ ನಾಯಕರಲ್ಲಿಯೇ ಅಸಮಾಧಾನ ಮೂಡಿದೆ. ಪರಾಜಿತ ಅಭ್ಯರ್ಥಿಗಳು ಮಾತ್ರವಲ್ಲದೇ ಕಾಂಗ್ರೆಸ್ ಹಿರಿಯ ನಾಯಕರು, ಶಾಸಕರು ಸಹ ಗ್ಯಾರಂಟಿ ಯೋಜನೆಗಳ ಬಗ್ಗೆ ಪರಾಮರ್ಶೆ ನಡೆಸುವಂತೆ ಸರಕಾರವನ್ನು ಒತ್ತಾಯಿಸಿದ್ದಾರೆ.

ರಾಜ್ಯದಲ್ಲಿ ಕಾಂಗ್ರೆಸ್ ಕಳಪೆ ಪ್ರದರ್ಶನಕ್ಕೆ ಕೈ ಪಕ್ಷದಲ್ಲಿಯೇ ಕಾಲೆಳೆಯುವ ಮುಖಂಡರು ಒಂದು ರೀತಿಯಲ್ಲಿ ಪ್ರಮುಖ ಕಾರಣವಾದರೆ, ಗ್ಯಾರಂಟಿ ಯೋಜನೆ ಘೋಷಣೆ, ಅನುಷ್ಠಾನದ ರೀತಿಯೂ ಕೈ ಪಕ್ಷದ ಸೋಲಿಗೆ ಇನ್ನೊಂದು ಕಾರಣವಾಗಿದೆ. ವಿಧಾನಸಭೆ ಚುನಾವಣೆಗೂ ಮುನ್ನ ಕಾಂಗ್ರೆಸ್ ಐದೂ ಗ್ಯಾರಂಟಿಗಳನ್ನು ಘೋಷಣೆ ಮಾಡಿತು. ಗ್ಯಾರಂಟಿ ಕಾರ್ಯಕ್ರಮಗಳು ಬಡವರ ಬದುಕಿನಲ್ಲಿ ಬದಲಾವಣೆ ತರುವ ಕಾರ್ಯಕ್ರಮಗಳು ನಿಜ. ಆದರೆ ರಾಜ್ಯದಲ್ಲಿ ಬಡವರಷ್ಟೆ ಅಲ್ಲದೇ ಇನ್ನಿತರ ಜನರೂ ಇದ್ದಾರೆ ಎನ್ನುವುದನ್ನು ಮರೆತಿದ್ದು ದೊಡ್ಡ ಕಾರಣ. ಅದಕ್ಕಿಂತ ಮುಖ್ಯವಾಗಿ ಗ್ಯಾರಂಟಿ ಯೋಜನೆ ಅನುಷ್ಠಾನದಿಂದ ಏನೆಲ್ಲಾ ಪರಿಣಾಮಗಳು ಎದುರಾಗುತ್ತವೆ ಎನ್ನುವುದನ್ನು ಅರ್ಥ ಮಾಡಿಕೊಳ್ಳುವಲ್ಲಿ ಕಾಂಗ್ರೆಸ್ ಯಡವಿದ್ದು ಲೋಕಸಭೆ ಚುನಾವಣೆ ಸೋಲಿಗೆ ಕಾರಣವಾಯಿತು.

ಅದರಲ್ಲೂ ಶಕ್ತಿ ಯೋಜನೆಯಿಂದ ಆಟೋ ಚಾಲಕರು ತೀವ್ರ ಸಂಕಷ್ಟ ಎದುರಿಸಬೇಕಾಯಿತು. ಉಚಿತ ಬಸ್ ಯೋಜನೆಯಿಂದ ಜನರ ಓಡಾಟ ಹೆಚ್ಚಾಯಿತು. ಸುಖಕರ ಮತ್ತು ಸುರಕ್ಷಿತ ಪ್ರಯಾಣಕ್ಕೆ ಹೆಸರಾದ ಸಾರಿಗೆ ಸಂಸ್ಥೆ ಬಸ್ಸುಗಳು ಮೂಲ ಆಶಯವನ್ನು ಮರೆತು ಜನರನ್ನು ಕುರಿಗಳ ರೀತಿಯಲ್ಲಿ ತುಂಬಿಕೊಂಡು ಹೋಗಲು ಪ್ರಾರಂಭಿಸಿದವು. ದುಡ್ಡು ಕೊಟ್ಟು ಆರಾಮಾಗಿ ಬಸ್ಸಿನಲ್ಲಿ ಓಡಾಡಬೇಕು ಎನ್ನುವ ಮನಸ್ಥಿತಿಯ ಮಧ್ಯಮ ವರ್ಗದ ಜನ ಸೀಟಿಗಾಗಿ ಪರದಾಡುವಂತಾಯಿತು. ಶಕ್ತಿ ಯೋಜನೆ ನಂತರ ಸರಕಾರದ ಒಬ್ಬ ಮಂತ್ರಿಯೂ ಬಸ್ ನಿಲ್ದಾಣಗಳತ್ತ ಸುಳಿಯಲಿಲ್ಲ. ಯೋಜನೆ ಅನುಷ್ಠಾನದ ನಂತರ ಸಾಧಕ ಬಾಧಕಗಳ ಬಗ್ಗೆ ಚರ್ಚೆ ನಡೆಸದಿರುವುದು ಒಂದು ಕಾರಣ.

ಇನ್ನು ನಿರುದ್ಯೋಗಿ ಭತ್ಯೆ ಕೇವಲ ಪ್ರಸಕ್ತ ವರ್ಷ ಪಾಸಾದ ಅಭ್ಯರ್ಥಿಗಳಿಗೆ ಮಾತ್ರ ಎಂದರು. ಹಿಂದಿನ ವರ್ಷದಲ್ಲಿ ಓದಿದ್ದವರು ಕೈ ಬಿಟ್ಟು ಕಮಲ ಹಿಡಿದರು. 200 ಯುನಿಟ್ ವರೆಗೆ ಉಚಿತ ವಿದ್ಯುತ್ ಎಂದರು, ಸರಾಸರಿ ಬಳಕೆಯನ್ನು ಮಾತ್ರ ಪರಿಗಣಿಸಿದರು. ಲಕ್ಷಾಂತರ ಕುಟುಂಬಕ್ಕೆ ಪಡಿತರ ಚೀಟಿ ನೀಡದೆ ಸದ್ಯ ಇರುವ ಪಡಿತರ ಚೀಟಿಯ ಕುಟುಂಬದ ಯಜಮಾನಿಯರಿಗೆ 2 ಸಾವಿರ ರೂ. ಕೊಟ್ಟರು. ಪಡಿತರ ಚೀಟಿ ಇಲ್ಲದವರು ಬಿಜೆಪಿಯತ್ತ ಮುಖ ಮಾಡಿದರು. ಹೀಗೆ ಪ್ರತಿಯೊಂದು ಗ್ಯಾರಂಟಿ ಕಾರ್ಯಕ್ರಮವೂ ಕಾಂಗ್ರೆಸ್ಸಿಗೆ ಎಷ್ಟು ಮತಗಳನ್ನು ತಂದು ಕೊಟ್ಟಿದೆಯೋ ಅದಕ್ಕಿಂತ ಹೆಚ್ಚು ಮತಗಳನ್ನು ಕಸಿದುಕೊಂಡಿದೆ.

ಇಂಥ ನೂರಾರು ಕಾರಣಗಳು ಗ್ಯಾರಂಟಿ ಯೋಜನೆಯಿಂದ ಆಗಿದೆ. ಆ ಬಗ್ಗೆ ಪರಾಮರ್ಶೆ ಮಾಡಬೇಕು. ಇನ್ನಷ್ಟು ಸುಧಾರಣೆಯ ಹಾದಿಗಳಿದ್ದರೆ ಅವುಗಳ ಬಗ್ಗೆ ಚಿಂತನೆ ನಡೆಸಬೇಕು. ಆದರೆ ಬಂದ್ ಮಾಡುವಂಥ ಕೆಲಸಕ್ಕೆ ಮುಂದಾದರೆ, ಭವಿಷ್ಯದ ವಿಧಾನಸಭೆ ಚುನಾವಣೆಯಲ್ಲೂ ಜನ ಕೈ ಬಿಟ್ಟು ಕಮಲ ಹಿಡಿಯಬೇಕಾದ ಪರಿಸ್ಥಿತಿ ತಂದುಕೊಳ್ಳಬೇಕಾಗುತ್ತದೆ.

# ಯೋಗ

ಯೋಗವ ಮಾಡೋಣ
ಪ್ರತಿದಿನ ಯೋಗವ ಮಾಡೋಣ
ಜಗವೇ ಮೆಚ್ಚಿದ ಯೋಗವ
ಮಾಡಿ ನಿರೋಗಿಯಾಗೋಣ ॥

ನಾವು ಬಾಳ ಬ್ಯುಸಿ
ಟೈಮೆ ಸಿಗೋಲ್ಲ ಈಸಿ
ಯಾಕೆ ಇಂತಾ ರಾಗ...
ಮಾಡ್ಲೇಬೇಕು ಯೋಗ
ಬೆಳಿಗ್ಗೆಯಾಗಲಿ ಸಂಜೆಯಾಗಲಿ
ಮಾಡೋಣ ಯೋಗ
ಚಿಕ್ಕವರು ದೊಡ್ಡವರು
ಬಡವರು ಶ್ರೀಮಂತರು
ಜಾತಿ ಧರ್ಮ ಮಾಡದೆಯೆ
ನಿತ್ಯವು ಯೋಗವ ಮಾಡಿದರೆ
ಬದಲಾಗುತ್ತೈತೆ ನಮ್ಮ ಯೋಗ
ಉಲ್ಲಾಸ ಉತ್ಸಾಹ ಮೈಮನದಾಗ

ತನು ಮನದ ಐಶ್ವರ್ಯವನು ಹೆಚ್ಚಿಗೆ ಮಾಡೋಣ
ಪಂಚಭೂತದ ಶಕ್ತಿಯ ದೇಹವ ರಕ್ಷಣೆ ಮಾಡೋಣ
ವಿಶ್ವವನ್ನೇ ಒಗ್ಗೂಡಿಸೊ ಶಕ್ತಿಯ ಯೋಗವ ಮಾಡೋಣ
ವಿಶ್ವಕೆ ಯೋಗ ಗುರುವಾಗಿ ನಾವೀ ಕಲೆಯನು ಕಲಿಸೋಣ

**– ಮಂಜುನಾಥ ಸಜ್ಜನರ.**

## ಸೂರ್ಯ ಮುಳುಗದ ನಾಡು : ನಾರ್ವೆ

# ಇದು ಭೂಮಂಡಲದ ಕೊನೆಯ ದೇಶ!

ಭೂಮಿ ದುಂಡಗಿದೆ ಎಂಬ ವಿಚಾರ ಪುಟ್ಟ ಮಕ್ಕಳಿಂದ ಹಿಡಿದು ಎಲ್ಲರಿಗೂ ಗೊತ್ತು. ಹಾಗಾದರೆ, ಅದಕ್ಕೆ ಆದಿ ಯಾವುದು, ಅಂತ್ಯ ಯಾವುದು ಎಂಬ ಪ್ರಶ್ನೆ ಕುತೂಹಲ ಮೂಡಿಸುತ್ತದೆ. ವಿಶ್ವದ ಅತಿದೊಡ್ಡ ಮತ್ತು ಶ್ರೀಮಂತ ದೇಶಗಳ ಬಗ್ಗೆ ನೀವು ಕೇಳಿರಬಹುದು, ಆದರೆ ಭೂಮಿಯ ಮೇಲಿನ ಕೊನೆಯ ದೇಶ ಯಾವುದು? ಈ ಬಗ್ಗೆ ವಿಜ್ಞಾನಿಗಳು, ಮೇಧಾವಿಗಳೆಲ್ಲರೂ ಸಾಕಷ್ಟು ಅಧ್ಯಯನ ನಡೆಸಿ ಉತ್ತರವನ್ನೂ ಕಂಡುಹಿಡಿದಿದ್ದಾರೆ. ಹಾಗಿದ್ದರೆ, ಈ ವಿಚಾರವನ್ನು ನಾವೂ ತಿಳಿದುಕೊಳ್ಳಬೇಕಲ್ವಾ?

ಈಗಾಗಲೇ ನಡೆದಿರುವ ಅಧ್ಯಯನಗಳ ಪ್ರಕಾರ, ನಾರ್ವೆ ಭೂಮಂಡಲದ ಕಟ್ಟಕಡೆಯ ದೇಶ. ಅದರಾಚೆ ಇನ್ನೇನೂ ಇಲ್ಲವೇ ಇಲ್ಲ. ಉತ್ತರ ಧ್ರುವಕ್ಕೆ ಅತ್ಯಂತ ಸಮೀಪದಲ್ಲಿರುವ ನಾರ್ವೆ ಭೂಮಿಯ ಮೇಲಿನ ಕೊನೆಯ ದೇಶವೆಂದು ಕರೆಯಲ್ಪಡುತ್ತದೆ. ಅಲ್ಲಿನ ವಿದ್ಯಮಾನಗಳನ್ನು ಗಮನಿಸಿದರೆ ಅಚ್ಚರಿಯೋ ಅಚ್ಚರಿ. ಅಲ್ಲಿ, ಮಧ್ಯರಾತ್ರಿಯಲ್ಲೂ ಸೂರ್ಯ ಕಣ್ಣೆದುರಿರುತ್ತಾನೆ. ಅಲ್ಲಿ ಆರು ತಿಂಗಳು ನಿರಂತರ ಹಗಲು. ಮತ್ತಾರು ತಿಂಗಳು ಸಂಪೂರ್ಣ ರಾತ್ರಿ! ಅರೆರೆ! ವಿಶೇಷವಲ್ಲದೇ ಮತ್ತಿನ್ನೇನು ಅಲ್ಲವಾ?

ಇ–69 ಹೆದ್ದಾರಿ ಇಲ್ಲಿಗೇ ಕೊನೆಗೊಳ್ಳುತ್ತದೆ. ಭೂಮಿಯ ಮೇಲಿರುವ ಪ್ರತಿಯೊಂದು ದೇಶವೂ ತನ್ನ ನೈಸರ್ಗಿಕ ಸೌಂದರ್ಯದಿಂದಾಗಿ, ಅಚ್ಚರಿಗಳಿಂದಾಗಿ ಎಂದಿಗೂ ಕುತೂಹಲ ಮೂಡಿಸುತ್ತಲೇ ಇರುತ್ತವೆ. ಕೆಲವು ದೇಶಗಳು ಅಲ್ಲಿನ ಐತಿಹಾಸಿಕ ಕಟ್ಟಡಗಳಿಗೆ ಪ್ರಸಿದ್ಧವಾಗಿದ್ದರೆ, ಇನ್ನೂ ಕೆಲವು ನೈಸರ್ಗಿಕ ದೃಶ್ಯಾವಳಿಗಳಿಗೆ



ಪ್ರಸಿದ್ಧವಾಗಿವೆ. ಆದರೆ, ನಾರ್ವೆ ಮಾತ್ರ ಹಲವು ಅಚ್ಚರಿಗಳನ್ನು ತನ್ನೊಳಗೆ ಹುದುಗಿಸಿಕೊಂಡಿದೆ. ಉತ್ತರ ನಾರ್ವೆಯ ಹ್ಯಾವರ್ಫೆಸ್ಟ್ ನಗರದಲ್ಲಿ, ಸೂರ್ಯ ಮುಳುಗುವುದು ಕೇವಲ 40 ನಿಮಿಷಗಳ ಕಾಲ ಮಾತ್ರ. ಆದ್ದರಿಂದ, ಇದನ್ನು ಮಧ್ಯರಾತ್ರಿಯ ಸೂರ್ಯನ ದೇಶ ಎಂದೂ ಕರೆಯಲಾಗುತ್ತದೆ.

ಅಂದರೆ, ಇಲ್ಲಿ ಇಡೀ ದಿನದಲ್ಲಿ ರಾತ್ರಿಯ ಸಮಯ ಕೇವಲ 40 ನಿಮಿಷ ಮಾತ್ರ. ಉಳಿದ 23 ಗಂಟೆ 20 ನಿಮಿಷಗಳ ಕಾಲ ಬೆಳಕಿನಿಂದ ತುಂಬಿರುತ್ತದೆ. ಬೇಸಿಗೆಯಲ್ಲಿ ನಾರ್ವೆ ಸಂಪೂರ್ಣವಾಗಿ ಹೆಪ್ಪುಗಟ್ಟುತ್ತದೆ. ವರ್ಷದ ಬಹುತೇಕ ಕಾಲ ತಂಪಾಗಿಯೇ ಇರುತ್ತದೆ. ವಿಶ್ವದ ಕೆಲವು ದೇಶಗಳಲ್ಲಿ, ಬೇಸಿಗೆಯಲ್ಲಿ ತಾಪಮಾನವು 45ರಿಂದ 50 ಡಿಗ್ರಿಗಳ ನಡುವೆ ಇದ್ದರೆ, ಈ ದೇಶದಲ್ಲಿ ಬೇಸಿಗೆಯಲ್ಲಿ ಹಿಮವಿರುತ್ತದೆ. ಈ ಸಮಯದಲ್ಲಿ, ಇಲ್ಲಿನ ತಾಪಮಾನವು ಶೂನ್ಯ ಡಿಗ್ರಿಗಳಷ್ಟಿರುತ್ತದೆ. ತೀವ್ರ ಚಳಿಗಾಲದಲ್ಲಿ ಇಲ್ಲಿನ ತಾಪಮಾನವು ಮೈನಸ್ 45 ಡಿಗ್ರಿಗಳಿಗೆ ಇಳಿಯುತ್ತದೆ.

ಇಂತಹ ಅಚ್ಚರಿಗಳು ಏನೇ ಇರಲಿ, ಇಲ್ಲಿನ ಸೌಂದರ್ಯ ಮಾತ್ರ ಬೇರೆಯದೇ ಒಂದು ಜಗತ್ತನ್ನು ಸೃಷ್ಟಿಸುತ್ತದೆ. ಹಿಂದೆಯೇ ಹೇಳಿದಂತೆ, ಬೇಸಿಗೆಯಲ್ಲಿ ಇಲ್ಲಿ ರಾತ್ರಿ ಇರುವುದಿಲ್ಲ. ಉತ್ತರ ಧ್ರುವಕ್ಕೆ ಹತ್ತಿರವಿರುವ ಕಾರಣ, ಇದು ಇತರ ದೇಶಗಳಂತೆ ಪ್ರತಿದಿನ ಹಗಲು ಅಥವಾ ರಾತ್ರಿ ಹೊಂದಿಲ್ಲ. ಬದಲಾಗಿ, ನಾರ್ವೆ ಆರು ತಿಂಗಳು ಹಗಲು ಮತ್ತು ಆರು ತಿಂಗಳು ರಾತ್ರಿಯನ್ನು ಹೊಂದಿದೆ. ಚಳಿಗಾಲದಲ್ಲಿ, ಇಲ್ಲಿ ಸೂರ್ಯ ಕಾಣುವುದೇ ಇಲ್ಲ. ವಿರುದ್ಧವಾಗಿ ಬೇಸಿಗೆಯಲ್ಲಿ, ಸೂರ್ಯ ಎಂದಿಗೂ ಮುಳುಗುವುದಿಲ್ಲ.

ಇ–69 ಹೆದ್ದಾರಿಯು ಭೂಮಿಯ ತುದಿಗಳನ್ನು ನಾರ್ವೆಗೆ ಸಂಪರ್ಕಿಸುತ್ತದೆ. ಈ ಹೆದ್ದಾರಿಯಲ್ಲಿ ಸಾಗುತ್ತಿದ್ದರೆ, ಮುಂದೇನು? ಏನೂ ಇಲ್ಲ. ಯಾಕೆಂದರೆ, ರಸ್ತೆ ಅಲ್ಲಿಗೇ ಕೊನೆಗೊಳ್ಳುತ್ತದೆ. ಇಲ್ಲಿ ಒಬ್ಬಂಟಿಯಾಗಿ ಪ್ರಯಾಣಿಸುವುದು ನಿಷೇಧ. ಇಲ್ಲಿ, ಹೆಚ್ಚಿನ ಜನರಿರುವ ಗುಂಪು ಪ್ರಯಾಣಿಕರು ಮಾತ್ರವೇ ಪ್ರಯಾಣಿಸಬಹುದು.

ಕಾರಣವಿಷ್ಟೇ. ಇಲ್ಲಿ ಎಲ್ಲೆಡೆ ಹಿಮದ ರಾಶಿ. ಏಕಾಂಗಿಯಾಗಿ ಪ್ರಯಾಣಿಸುವ ಸಂದರ್ಭದಲ್ಲಿ ಕಳೆದುಹೋಗುವ, ಹಿಮದ ರಾಶಿಯ ನಡುವೆ ಸಮಾಧಿಯಾಗಿಬಿಡುವ ಸಾಧ್ಯತೆಯಿರುವುದರಿಂದ ಏಕವ್ಯಕ್ತಿ ಪ್ರಯಾಣವನ್ನು ನಿಷೇಧಿಸಲಾಗಿದೆ. ಈ ಸ್ಥಳದಲ್ಲಿ ಸೂರ್ಯಾಸ್ತ ಮತ್ತು ಧ್ರುವೀಯ ದೀಪಗಳನ್ನು ನೋಡುವುದು ಬಹಳ ಮೋಜಿನ ಸಂಗತಿಯೂ ಹೌದು.

ನಾರ್ವೆಯ ಹೊರತಾಗಿ, ಅಲಾಸ್ಕಾ, ಸ್ವೀಡನ್, ಗ್ರೀನ್‌ಲ್ಯಾಂಡ್, ಡೆನ್ಮಾರ್ಕ್, ಯುಕಾನ್, ಪೀಟರ್ಸ್‌ಬರ್ಗ್ ಇತ್ಯಾದಿ ಸ್ಥಳಗಳೂ ಅತಿ ದೊಡ್ಡ ಹಗಲುಗಳನ್ನು ಕಾಣುತ್ತವೆಯಾದರೂ ಇವೆಲ್ಲವುಗಳ ಸಾಲಿನಲ್ಲಿ ನಾರ್ವೆ ಅಗ್ರಸ್ಥಾನದಲ್ಲಿ ನಿಲ್ಲುತ್ತದೆ. ಯಾಕೆಂದರೆ, ಇದೇ ಭೂಮಿಯ ಮೇಲಿನ ಕಟ್ಟ ಕಡೆಯ ದೇಶ! ದಶಕಗಳ ಹಿಂದೆ ಮೀನುಗಾರಿಕೆ ಪ್ರಮುಖವಾಗಿದ್ದ ನಾರ್ವೆ ಕ್ರಮೇಣ ಅಭಿವೃದ್ಧಿ ಹೊಂದುತ್ತ ಪ್ರವಾಸೋದ್ಯಮದತ್ತ ವಾಲಿತು. ಈಗ ನಾರ್ವೆಯಲ್ಲೇನಿದ್ದರೂ ಪ್ರವಾಸೋದ್ಯಮದ್ದೇ ಸಿಂಹಪಾಲು. ಇಲ್ಲಿ ಉಳಿಯಲು ಹೋಟೆಲ್‌ಗಳು ಮತ್ತು ರೆಸ್ಟೋರೆಂಟ್‌ಗಳ ಉದ್ಯಮ ಗಹನವಾಗಿ ಬೆಳೆದಿದೆ.

ಇನ್ನೂ ಅನೇಕ ವಿಶೇಷತೆಗಳು ನಾರ್ವೆಯ ಕಿರೀಟಕ್ಕೆ ಸೇರಿದೆ. ದಿ ವರ್ಲ್ಡ್ ಹ್ಯಾಪಿನೆಸ್ ರಿಪೋರ್ಟ್ ಪ್ರಕಾರ, ನಾರ್ವೆಯನ್ನು ವಿಶ್ವದ ಅತ್ಯಂತ ಸಂತುಷ್ಟ ದೇಶಗಳಲ್ಲಿ ಒಂದೆಂದು ಹೇಳಲಾಗಿದೆ. ಡೆನ್ಮಾರ್ಕ್ ಮೂಲದ ಹ್ಯಾಪಿನೆಸ್ ರಿಸರ್ಚ್ ಇನಸ್ಟಿಟ್ಯೂಟ್ ಪ್ರಕಟಿಸಿದ ಈ ವರದಿಯು ಈ ದೇಶ ಸುಂದರವಾದ ಸ್ಥಳ ಮಾತ್ರವಲ್ಲ, ಸಂತೋಷದ ಸ್ಥಳವಾಗಿದೆ ಎಂದು ಸಾಬೀತುಪಡಿಸುತ್ತದೆ.

ಜೊತೆಗೆ, ಜಾಗತಿಕ ಶಾಂತಿ ಸೂಚ್ಯಂಕದಂತಹ ಅನೇಕ ಇತರ ವಾರ್ಷಿಕ ವರದಿಗಳು ನಾರ್ವೆ ಭೇಟಿ ನೀಡಲು ಸುರಕ್ಷಿತ ಮತ್ತು ಶಾಂತಿಯುತ ದೇಶವಾಗಿದೆ ಎಂದು ಹೇಳುತ್ತವೆ. ನೊಬೆಲ್ ಶಾಂತಿ ಪ್ರಶಸ್ತಿ ಸಮಾರಂಭವು ವಾರ್ಷಿಕವಾಗಿ ಓಸ್ಲೋದಲ್ಲಿ ನಡೆಯುತ್ತದೆ. ಓಸ್ಲೋ ನಾರ್ವೆಯ ರಾಜಧಾನಿಯಾಗಿದ್ದು, ಸಾಂಪ್ರದಾಯಿಕ ಸ್ಕ್ಯಾಂಡಿನೇವಿಯನ್ ವಿನ್ಯಾಸ ಮತ್ತು ಆಧುನಿಕ ಪ್ರಭಾವಗಳ ಮಿಶ್ರಣವನ್ನು ಕಾಣಬಹುದು.

ನಾರ್ವೆಯ ರೈಲು ಪ್ರಯಾಣಗಳನ್ನು ಯುರೋಪ್‌ನಲ್ಲಿ ಅತ್ಯುತ್ತಮವೆಂದು ಆಯ್ಕೆ ಮಾಡಲಾಗಿದೆ. ಅತ್ಯಂತ ಜನಪ್ರಿಯ ಮಾರ್ಗಗಳಲ್ಲಿ ಒಂದಾದ ಫ್ಲಾಮ್ ರೈಲ್ವೆ ವಿಶ್ವದ ಅತ್ಯಂತ ಸುಂದರವಾದ ರೈಲ್ವೆಗಳಲ್ಲಿ ಒಂದಾಗಿದೆ.



# ಎನ್‌ಡಿಎ ಸರ್ಕಾರ ವರ್ಷದೊಳಗೆ ಪತನ: ಎಎಪಿ ಸಂಸದ ಸಂಜಯ್ ಸಿಂಗ್

**■ ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಬಿಜೆಪಿ ನೇತೃತ್ವದ ನೂತನ ಎನ್‌ಡಿಎ ಸರ್ಕಾರ ರಚನೆಯ ಬಗ್ಗೆ ಪ್ರತಿಕ್ರಿಯಿಸಿದ ಎಎಪಿ ಸಂಸದ ಸಂಜಯ್ ಸಿಂಗ್, "ನರೇಂದ್ರ ಮೋದಿ ನೇತೃತ್ವದ ಹೊಸ ಸರ್ಕಾರ ಒಂದು ವರ್ಷದಲ್ಲಿ ಪತನವಾಗಲಿದೆ" ಎಂದು ಭಾನುವಾರ ಹೇಳಿದ್ದಾರೆ. ಎನ್‌ಡಿಎ ಘಟಕಗಳ ನಿರೀಕ್ಷೆಗಳನ್ನು ಈಡೇರಿಸುವಲ್ಲಿ ಮೋದಿ ಸರ್ಕಾರ ವಿಫಲವಾಗುವ ಸಾಧ್ಯತೆಯಿದೆ ಎಂದು ಅವರು ಹೇಳಿದರು.



72 ಸದಸ್ಯರ ನೇತೃತ್ವದ ದಾಖಲೆಯ ಮೂರನೇ ಅವಧಿಗೆ ಮೋದಿ ಅವರು ಭಾನುವಾರ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು.

ರಚನೆಯಾಗಲಿರುವ ಈ ಹೊಸ (ಕೇಂದ್ರ) ಸರ್ಕಾರವು ಆರು ತಿಂಗಳಿಂದ ಒಂದು ವರ್ಷದ ಅವಧಿಯನ್ನು ಹೊಂದಿದೆ. ಇದು ಇದಕ್ಕಿಂತ ಹೆಚ್ಚು ಕಾಲ ಉಳಿಯುವುದಿಲ್ಲ" ಎಂದು ಪ್ರಯಾಗ್‌ರಾಜ್‌ನಲ್ಲಿರುವ ಸರ್ಕ್ಯೂಟ್ ಹೌಸ್‌ನಲ್ಲಿ ಸುದ್ದಿಗೋಷ್ಠಿಯಲ್ಲಿ ಸಿಂಗ್ ಹೇಳಿದರು.

ಪಿಎಂ ಮೋದಿಯವರು ಎನ್‌ಡಿಎ ಮತದಾರರ ನಿರೀಕ್ಷೆಗೆ ತಕ್ಕಂತೆ ಕೆಲಸಗಳನ್ನು ಮಾಡಲು ಹೋಗುತ್ತಿಲ್ಲ. ಅವರು ರಾಜಕೀಯ ಪಕ್ಷಗಳನ್ನು ಒಡೆಯುವ ತಮ್ಮ ಧೋರಣೆಯನ್ನು ಮುಂದುವರಿಸುತ್ತಾರೆ" ಎಂದು ಸಿಂಗ್ ಹೇಳಿದರು.


ಟಿಡಿಪಿ ಮತ್ತು ಜೆಡಿಯುಗೆ ನಾನು ಹೇಳಬಯಸುತ್ತೇನೆ, ನೀವೇ ಸ್ಪೀಕರ್ ಮಾಡಿ, ಇಲ್ಲದಿದ್ದರೆ ನಿಮ್ಮ ಪಕ್ಷದ ಎಷ್ಟು ಸಂಸದರು ಒಡೆದು ಅವರನ್ನು ಸೇರುತ್ತಾರೆ ಎಂಬುದಕ್ಕೆ ಯಾವುದೇ ಗ್ಯಾರಂಟಿ ಇಲ್ಲ ಎಂದು ಅವರು ಹೇಳಿದರು.

ಮೋದಿ 2.0 ಸಂಪುಟದ ಎಲ್ಲ ಸಚಿವರಾದ ರಾಜನಾಥ್ ಸಿಂಗ್, ಅಮಿತ್ ಶಾ, ನಿತಿನ್ ಗಡ್ಕರಿ, ನಿರ್ಮಲಾ ಸೀತಾರಾಮನ್ ಮತ್ತು ಎಸ್ ಜೈಶಂಕರ್ ಸೇರಿದಂತೆ ಬಿಜೆಪಿಯ ಹಿರಿಯ ನಾಯಕರು ರಾಷ್ಟ್ರಪತಿ ಭವನದಲ್ಲಿ ಸಂಪುಟ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದರು.

# ಜನಗಣತಿ ನಡೆಸುವಂತೆ ಪ್ರಧಾನಿ ಮೋದಿಗೆ ಜೈರಾಮ್ ರಮೇಶ್ ಆಗ್ರಹ

**■ ವಿಜಯಸಾಕ್ಷಿ ಸುದ್ದಿ, ನವದೆಹಲಿ**

'ನವೀಕರಿಸಿದ ಜನಗಣತಿಯನ್ನು ಯಾವಾಗ ನಡೆಸಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಶೀಘ್ರದಲ್ಲೇ ದೇಶಕ್ಕೆ ತಿಳಿಸಬೇಕು, ಸಾಮಾಜಿಕ ನ್ಯಾಯಕ್ಕೆ ನಿಜವಾದ ಅರ್ಥ ನೀಡಲು ಒಬಿಸಿ ಎಂದು ವರ್ಗೀಕರಿಸಲಾದ ಸಮುದಾಯಗಳ ಜನಸಂಖ್ಯೆಯ ಡೇಟಾವನ್ನು ಸಹ ನೀಡಬೇಕು' ಎಂದು ಕಾಂಗ್ರೆಸ್ ಸೋಮವಾರ ಒತ್ತಾಯಿಸಿದೆ.



ಕೇಂದ್ರ ಸರ್ಕಾರವು ಪ್ರತಿ 10 ವರ್ಷಗಳಿಗೊಮ್ಮೆ ಸಾಮಾಜಿಕ ಆರ್ಥಿಕ ಅಭಿವೃದ್ಧಿಗೆ ಅಗತ್ಯವಾದ ಸಮಗ್ರ ಜನಗಣತಿಯನ್ನು ನಡೆಸುತ್ತದೆ ಎಂದು ಕಾಂಗ್ರೆಸ್ ಮುಖಂಡ ಜೈರಾಮ್ ರಮೇಶ್ ಹೇಳಿದ್ದಾರೆ. ಕೊನೆಯ ಜನಗಣತಿ 2021 ರಲ್ಲಿ ಪೂರ್ಣಗೊಳ್ಳಬೇಕಿತ್ತು.

ಆದರೆ ಮೋದಿಯವರು ಅದನ್ನು ಮಾಡಲಿಲ್ಲ. 2021 ರ ಜನಗಣತಿಯನ್ನು ನಡೆಸದಿರುವ ಒಂದು ತಕ್ಷಣದ ಪರಿಣಾಮವೆಂದರೆ, ಕನಿಷ್ಠ 14 ಕೋಟಿ ಭಾರತೀಯರು ರಾಷ್ಟ್ರೀಯ ಆಹಾರ ಭದ್ರತಾ ಕಾಯಿದೆ, 2013 ರ ಅಡಿಯಲ್ಲಿ ಪ್ರಯೋಜನಗಳಿಂದ ವಂಚಿತರಾಗುತ್ತಿದ್ದಾರೆ, ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆ ಎಂದು ಮರು ಪ್ಯಾಕೇಜ್ ಮಾಡಲಾಗಿದೆ" ಎಂದು ಅವರು ಹೇಳಿದರು.

ಯೋಜನೆಯಡಿ, 2023 ರಲ್ಲಿ ಸರ್ಕಾರದ ಪತ್ರಿಕಾ ಪ್ರಕಟಣೆಯ ಪ್ರಕಾರ, 81.35 ಕೋಟಿ ಎನ್‌ಎಫ್‌ಎಸ್‌ಎ ಫಲಾನುಭವಿಗಳಿಗೆ ಐದು ವರ್ಷಗಳವರೆಗೆ ಉಚಿತ ಆಹಾರ ಧಾನ್ಯಗಳನ್ನು ಜನವರಿ 1, 2024 ರಿಂದ ನೀಡಲಾಗುವುದು.

# ಮೋದಿಜಿಗೊಂದು ಸಲಾಂ

ಪ್ರಧಾನಿಯಾಗಿ ಭಾರತದ ಉದ್ಧಾರಕನಾದ
ಮೋದಿಜಿಗೆ ನನ್ನದೊಂದು ಸಲಾಂ
ದೇಶ ಕಾಯುವುದರಲ್ಲಿ ಚೌಕೀದಾರನಾದ
ಆಡಳಿತ ನಿರ್ವಹಣೆಯಲ್ಲಿ ಶಿವಾಜಿ ಮಹಾರಾಜನಾದ
ಮೋದಿಜಿಗೊಂದು ಸಲಾಂ
ವಾಕ್ಪಟುತ್ವ ಹೊಂದಿದ ನರೇಂದ್ರನಾದ
ದೇಶದ ಆರ್ಥಿಕಾಭಿವೃದ್ಧಿಗೆ ಚಾಣಕ್ಯನಂತಾದ
ಮೋದಿಜಿಗೊಂದು ಸಲಾಂ
ಸರಳತೆಗೆ ಮತ್ತೊಂದು ಹೆಸರಾದ
ಹೃದಯ ವೈಶಾಲ್ಯತೆಯಿಂದ ಮೆರೆದ
ಮೋದಿಜಿಗೊಂದು ಸಲಾಂ
ದುಷ್ಟರ ಶಿಕ್ಷಕ, ಶಿಷ್ಟರ ರಕ್ಷಕನಾದ
ತಾರತಮ್ಯವಿಲ್ಲದೇ ಅಭಿವೃದ್ಧಿಗೆ ಪಥ ತೋರಿದ
ಮೋದಿಜಿಗೊಂದು ಸಲಾಂ
ಕಾಶ್ಮೀರದ ಅಭಿವೃದ್ಧಿಯ ಹರಿಕಾರನಾದ
ಬೇಟಿ ಬಚಾವೋ ಬೇಟಿ ಪಡಾವೋದ ಸೂತ್ರಧಾರನಾದ
ಮೋದಿಜಿಗೊಂದು ಸಲಾಂ
ಜನಧನದಿಂದ ಜನರ ಮಂತ್ರಮುಗ್ಧರನ್ನಾಗಿಸಿದ
ಬಡಜನರ ಉದ್ಧಾರಕ್ಕೆ ತನ್ನನ್ನೇ ಸಮರ್ಪಿಸಿಕೊಂಡ
ಮೋದಿಜಿಗೊಂದು ಸಲಾಂ
ರಾಮ ಮಂದಿರದ ಪುನರ್ ನಿರ್ಮಾಣಕ್ಕೆ ನಾಂದಿ ಹಾಡಿದ
ವಿಂಗ್ ಕಮಾಂಡರ್ ಅಭಿನಂದನ್‌ಗೆ ಸಂಜೀವಿನಿಯಾದ
ಮೋದಿಜಿಗೊಂದು ಸಲಾಂ
ಭಯೋತ್ಪಾದನೆಗೆ ಭಯ ಹುಟ್ಟಿಸಿದ
ದೇಶಭಕ್ತರುಗಳಿಗೆ ಅಭಯ ನೀಡಿದ
ಮೋದಿಜಿಗೊಂದು ಸಲಾಂ
ಪ್ಲಾಸ್ಟಿಕ್ ನಿಷೇಧಿಸಿ ಸ್ವಚ್ಛತೆಗೆ ಆದ್ಯತೆ ನೀಡಿದ
ಗಂಗಾ ನದಿಯ ಸ್ವಚ್ಛತೆಗೆ ಕಾರಣೀಭೂತನಾದ
ಮೋದಿಜಿಗೊಂದು ಸಲಾಂ
ಸರ್ಜಿಕಲ್ ಸ್ಟ್ರೈಕ್‌ನ ರೂವಾರಿಯಾದ
ಕೊರೋನಾ ವಿರುದ್ಧ ಸೆಣಸಾಡಿ ಧೀರನಾದ
ಮೋದಿಜಿಗೊಂದು ಸಲಾಂ
ಸಮಾಜದ ಸುಧಾರಕನಾಗಿ ಎಲ್ಲರಿಗೂ ಆಪ್ತನಾದ
ಜಾತಿ ಮತ ಎನ್ನದೇ ದೇಶಭಕ್ತಿಯಂಕುರಕೆ ನಾಯಕನಾದ
ಮೋದಿಜಿಗೊಂದು ಸಲಾಂ

**– ಅಂಜನಾ ರಾಘವೇಂದ್ರ ಕುಬೇರ, ಗದಗ.**



ನರೇಂದ್ರ ಮೋದಿಯವರು 3ನೇ ಬಾರಿಗೆ ಪ್ರಧಾನಮಂತ್ರಿಗಳಾಗಿ ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ನಗರದ ಗಂಜಿ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಬಿಜೆಪಿ ರೈತ ಮೋರ್ಚಾ ಗದಗ ನಗರ ಮಂಡಲ ವತಿಯಿಂದ ಅಧ್ಯಕ್ಷರಾದ ಶಂಕರ ಕರಬಿಷ್ಠಿ ನೇತೃತ್ವದಲ್ಲಿ ಸಸಿ ನೆಡಲಾಯಿತು. ಈ ಸಂದರ್ಭದಲ್ಲಿ ಗುರುಶಾಂತಗೌಡ ಮರಿಗೌಡ್ರ, ಬಸಪ್ಪ ಪಡಗದ, ಬಸವರಾಜ ಹುಬ್ಬಳ್ಳಿ, ಶಿವಪ್ಪ ಮುಳ್ಳಾಳ, ಸಿದ್ಧಲಿಂಗನಗೌಡ ಉಮಚಗಿ, ಪ್ರಭು ಕಲಬಂಡಿ, ಸಿದ್ದಿಂಗಪ್ಪ ಗಾಣಿಗೇರ, ಲಕ್ಷ್ಮಣ ವಾಲ್ಮೀಕಿ, ಶರಣಗೌಡ ಮರೀಗೌಡ್ರ, ನಾಗು ಹುಂಬಿ, ಇಮಾಮಸಾಬ್ ಉಮಚಗಿ, ತೋಟಯ್ಯ ವಿಭೂತಿಮಠ, ಬಸವರಾಜ ಬಟ್ಟೂರ ಮುಂತಾದವರು ಉಪಸ್ಥಿತರಿದ್ದರು.



ಮುಳಗುಂದದ ಬ್ರಾಹ್ಮಣ ಸಮಾಜದ ಸುಮಂಗಲೆಯರಿಗೆ ಉಡಿ ತುಂಬುವ ಕಾರ್ಯಕ್ರಮವನ್ನು ಶ್ರೀಪಾದನಾಯ್ಕ ಶಂ.ತಮ್ಮಣ್ಣವರ (ಚಿನಿವಾಲರ) ದಂಪತಿಗಳಿಂದ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಸುಮತಿ ಗುಡಿ, ಲತಾ ಡಂಬಳ, ಭಾಗ್ಯಲಕ್ಷ್ಮಿ ಗೂ.ಇಂಗಳಗಿ, ಇಂದುಮತಿ ಡಂಬಳ, ಗೌರಿ ಕುರಂದವಾಡ, ಗೀತಾ ಗುಡಿ, ಅನುಷಾ ಕುಲಕರ್ಣಿ, ಗೀತಾ ಕುಲಕರ್ಣಿ, ವಿದ್ಯಾ ಸೊರಟೂರ, ವಿನೋದ ಕುಲಕರ್ಣಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಲೈಂಗಿಕ ದೌರ್ಜನ್ಯ ಆರೋಪ

**■ ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಬಿಜೆಪಿ ಐಟಿ ಸೆಲ್ ಮುಖ್ಯಸ್ಥ ಅಮಿತ್ ಮಾಳವೀಯ ವಿರುದ್ಧ ಲೈಂಗಿಕ ದೌರ್ಜನ್ಯ ಆರೋಪ ಕೇಳಿ ಬಂದಿದೆ. "ನಾವು ಬಿಜೆಪಿಗೆ ಕೇಳುವ ಏಕೈಕ ವಿಷಯವೆಂದರೆ ಮಹಿಳೆಯರಿಗೆ ನ್ಯಾಯ. ಪ್ರಧಾನಿ ಮೋದಿ ಪ್ರಮಾಣವಚನ ಸ್ವೀಕರಿಸಿದ 24 ಗಂಟೆಯೊಳಗೆ ಬಿಜೆಪಿಯ ಪ್ರಮುಖ ಪದಾಧಿಕಾರಿಯ ವಿರುದ್ಧ ಲೈಂಗಿಕ ಶೋಷಣೆಯ ಗಂಭೀರ ಆರೋಪ ಕೇಳಿ ಬಂದಿದೆ.

ನಾವು ಅಮಿತ್ ಮಾಳವೀಯಾ ಅವರನ್ನು ಅವರ ಹುದ್ದೆಯಿಂದ ವಜಾಗೊಳಿಸುವಂತೆ ಆಗ್ರಹಿಸುತ್ತಿದ್ದೇವೆ" ಎಂದು ಸುಪ್ರಿಯಾ ಶ್ರೀನಾಟೆ ಹೇಳಿದ್ದಾರೆ. ಇದು ಬಿಜೆಪಿಯ ಐಟಿ ಸೆಲ್ಲಾ..ಇಲ್ಲ ಅಪರಾಧಿಗಳ ಕೂಟವೇ? ಮಹಿಳೆಯರ ವಿರುದ್ಧದ ಯಾವುದೇ ಅಪರಾಧದಲ್ಲಿ ಬಿಜೆಪಿ ನಾಯಕರೇ ಯಾವಾಗಲೂ ಆರೋಪಿಯಾಗಿರುವುದು ಏಕೆ? ಬಿಜೆಪಿ ಪದಾಧಿಕಾರಿಯ ವಿರುದ್ಧ ಗಂಭೀರ ಆರೋಪಗಳು ಕೇಳಿ ಬಂದರೂ, ಇಡೀ ಬಿಜೆಪಿ ಮೌನವಾಗಿರುವುದು ಏಕೆ? ಇಂತಹ ಆರೋಪಗಳ ಬಗ್ಗೆ ಮೌನವಹಿಸುವುದರ ಹಿಂದಿನ ಸತ್ಯವೇನು, ಈ ಪದಾಧಿಕಾರಿಯನ್ನು ಏಕೆ ಮತ್ತು ಯಾರ ಇಚ್ಛೆಯಂತೆ ರಕ್ಷಿಸಲಾಗುತ್ತಿದೆ? ಸದಾ ಆರೋಪಿಗಳಿಗೆ ರಕ್ಷಣೆ ನೀಡುವ ನರೇಂದ್ರ ಮೋದಿಯವರು ಮಹಿಳಾ ರಕ್ಷಣೆಯ ಬಗ್ಗೆ ಯಾವ ಬಾಯಲ್ಲಿ ಮಾತನಾಡುತ್ತಾರೆ? ಎಂದು ಸುಪ್ರಿಯಾ ಪ್ರಶ್ನಿಸಿದ್ದಾರೆ.

'ಉಡಾನ್ ಟ್ರೇಡ್ ಫೇರ್' ಉದ್ಘಾಟಿಸಿದ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅಭಿಮತ

# ತೊಟ್ಟಿಲು ತೂಗುವ ಕೈ ಜಗವನ್ನಾಳಬಲ್ಲದು

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಾಚೀನ ಕಾಲದಲ್ಲಿ ಮಹಿಳೆಗೆ ಸ್ವಾತಂತ್ರ್ಯ ಇರಲಿಲ್ಲ. ಆಧುನಿಕ ಯುಗದಲ್ಲಿ ಮಹಿಳೆಯರಿಗೆ ಎಲ್ಲಾ ರೀತಿಯ ಸ್ವಾತಂತ್ರ್ಯ ಇದ್ದು, ಸ್ಪರ್ಧಾತ್ಮಕ ಯುಗದಲ್ಲಿ ಮಹಿಳೆಯರು ಸಾರ್ವಜನಿಕ ವಲಯಗಳಲ್ಲಿ ಮುಂಚೂಣಿಯಲ್ಲಿದ್ದಾರೆ. ಗದಗ, ಹುಬ್ಬಳ್ಳಿ, ಶಿವಮೊಗ್ಗ ಜೈನ ಸಮುದಾಯದ ಮಹಿಳೆಯರು ಸ್ಟಾಲ್‌ಗಳನ್ನು ತೆರೆಯುವ ಮೂಲಕ ಸ್ವಾವಲಂಬಿ ಮತ್ತು ಆರ್ಥಿಕವಾಗಿ ಶಕ್ತರಾಗಬೇಕು ಎಂಬ ಸಂದೇಶವನ್ನು ಮಹಿಳಾ ಸಮುದಾಯಕ್ಕೆ ನೀಡಿದ್ದಾರೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಹೇಳಿದರು.

ಜೈನ್ ಇಂಟರ್‌ನ್ಯಾಷನಲ್ ಟ್ರೇಡ್ ಆರ್ಗನೈಜೇಶನ್ ಹುಬ್ಬಳ್ಳಿ, ಗದಗ, ಬಾಗಲಕೋಟ, ಶಿವಮೊಗ್ಗ, ಮಹಿಳಾ ಸಂಘಟನೆಯ ವತಿಯಿಂದ ಮಹಿಳೆಯರಿಗಾಗಿ ಸ್ವಯಂ ಉದ್ಯೋಗ ಮಾಡುವ ಕುರಿತು ಹಮ್ಮಿಕೊಂಡಿದ್ದ 'ಉಡಾನ್ ಟ್ರೇಡ್ ಫೇರ್' ಕಾರ್ಯಕ್ರಮವನ್ನು ನಗರದ ಶ್ರೀ ವಿಠ್ಠಲರೂಢ ಸಮುದಾಯ ಭವನದಲ್ಲಿ



ಉದ್ಘಾಟಿಸಿ ಅವರು ಮಾತನಾಡಿದರು.

ಇದೇ ಸಂದರ್ಭದಲ್ಲಿ ಜೈನ ಸಮಾಜದ ಸಾಧಕರನ್ನು ಹಾಗೂ ಗದಗ ಜಿಲ್ಲಾಧಿಕಾರಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಪ್ರದರ್ಶನದಲ್ಲಿ ಜೈನ ಮಹಿಳೆಯರು ಸ್ವತಃ ತಯಾರಿಸಿದ ಎಲ್ಲಾ ತರಹದ ವಸ್ತುಗಳ, ಆಹಾರ ಪದಾರ್ಥಗಳ ಅಂಗಡಿಗಳ ಪ್ರದರ್ಶನದಲ್ಲಿ ಸೀರೆಗಳು, ಪಾಶ್ಚಿಮಾತ್ಯ ಕಲೆಕ್ಷನ್, ಮನೆಯ ಅಲಂಕಾರ ವಸ್ತುಗಳು, ಬೇಕರಿ ಆಹಾರಗಳು ಸೇರಿದಂತೆ 35 ಅಂಗಡಿಗಳು ಪ್ರದರ್ಶನಗೊಂಡವು. ಟೂರ್ಸ್ & ಟ್ರಾವೆಲ್ಸ್ ಮಾಹಿತಿ ಕೇಂದ್ರದ ಮೂಲಕ ವಿವಿಧ ಪ್ರವಾಸಿ ತಾಣಗಳ ಬಗ್ಗೆ ಮಾಹಿತಿ ನೀಡಲಾಯಿತು.

ಜೈನ ಸಮಾಜದ ಮಹಿಳೆಯರ ಈ ಕಾರ್ಯ ವೈಖರಿ ಮಹಿಳಾ ಸಮುದಾಯಕ್ಕೆ ಮಾದರಿಯಾಗಿದೆ. ತೊಟ್ಟಿಲು ತೂಗುವ ಕೈ ಜಗತ್ತನ್ನೇ ತೂಗಬಲ್ಲದು ಎಂಬ ಮಾತನ್ನು ಜೈನ ಸಮುದಾಯದ ಮಹಿಳೆಯರು ಸಾಬೀತು ಪಡಿಸಿದ್ದಾರೆ. ಮಹಿಳೆಯರು ಹೆಚ್ಚು ಹೆಚ್ಚು ಗುಣಾತ್ಮಕ ಕೆಲಸಗಳಲ್ಲಿ ತೊಡಗಿ ಇತರ ಮಹಿಳೆಯರಿಗೆ ಸ್ಫೂರ್ತಿ ತುಂಬಬೇಕೆಂದು ಜಿಲ್ಲಾಧಿಕಾರಿಗಳು ಅಭಿಪ್ರಾಯಪಟ್ಟರು.

ಇಂದಿರಾ ಬಾಗಮಾರ ಕಾರ್ಯಕ್ರಮ ನಿರೂಪಿಸಿದರು. ಪ್ರವೀಣ ಚೌಧರಿ, ರೂಪಚಂದ ಪಾಲರೇಚಾ, ಪಂಕಜ ಬಾಫಣ, ಮನೀಶ ಬನ್ಸಾಲಿ, ಸುರೇಶ ಓಸ್ವಾಲ್, ಯೇಸ್ಮಾ ಜೈನ್, ಅನಿಲ ಜೈನ, ಇಂದಿರಾ ಬಾಗಮಾರ, ಸುರೇಶ ಕೊಠಾರಿ, ಅರಿಹಂತ ಟ್ರೇಡರ್ಸ, ಸ್ವೀಟಿ ಬನ್ಸಾಲಿ ಸೇರಿದಂತೆ ಜೈನ್ ಸಮಾಜದ ಮಹಿಳೆಯರು, ಹಿರಿಯರು, ಯುವಕರು, ಮಹಿಳೆಯರು ಉಪಸ್ಥಿತರಿದ್ದರು.

ಪತ್ರಿಕಾಗೋಷ್ಠಿಯಲ್ಲಿ ಗೂಳಪ್ಪ ಮಜ್ಜಿಗುಡ್ಡ ಮಾಹಿತಿ

## 13ರಂದು ರಾಜ್ಯಮಟ್ಟದ ಟಗರಿನ ಕಾಳಗ




■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಮುಳಗುಂದ ಪಟ್ಟಣದ ಸಾಮಾಜಿಕ ಕಾರ್ಯಕರ್ತ ಬಸವರಾಜ ಹಾರೋಗೇರಿ ಅವರ ಜನ್ಮದಿನದ ನಿಮಿತ್ತ ಜೂನ್ 13ರಂದು ಸಂಜೆ 4 ಗಂಟೆಗೆ ಎಸ್‌ಜೆಜೆಎಂ ಹೈಸ್ಕೂಲ್ ಮೈದಾನದಲ್ಲಿ ರಾಜ್ಯಮಟ್ಟದ ಟಗರಿನ ಕಾಳಗ ಹಮ್ಮಿಕೊಳ್ಳಲಾಗಿದೆ ಎಂದು ಗೂಳಪ್ಪ ಮಜ್ಜಿಗುಡ್ಡ ಹೇಳಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗಿಡ್ ಬಸ್ಯಾ ಗ್ರೂಪ್ ವತಿಯಿಂದ ಈ ಸ್ಪರ್ಧೆ ಆಯೋಜಿಸಲಾಗಿದ್ದು, ಒಟ್ಟು 5 ವಿಭಾಗದಲ್ಲಿ ಟಗರಿನ ಕಾಳಗ ನಡೆಯಲಿದೆ. ರಾಜ್ಯದ ಸುಮಾರು 20 ಜಿಲ್ಲೆಗಳಿಂದ ಟಗರುಗಳು ಆಗಮಿಸಲಿವೆ. ಪ್ರತಿಯೊಂದು ವಿಭಾಗಕ್ಕೂ ಪ್ರತ್ಯೇಕವಾಗಿ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನ ನೀಡಲಾಗುತ್ತದೆ ಎಂದು ತಿಳಿಸಿದರು.

ಬಸವರಾಜ ಹಾರೋಗೇರಿ ಅವರು ಮುಳಗುಂದ ಭಾಗದಲ್ಲಿ ತಮ್ಮ ಸಾಮಾಜಿಕ ಸೇವೆಗಳ ಮೂಲಕ ಜನಮನ ಸೆಳೆದಿದ್ದಾರೆ. ಗಗನ ಫೌಂಡೇಶನ್ ಮೂಲಕ ಪ್ರತಿ ವರ್ಷ 1 ಸಾವಿರ ನೋಟ್‌ಬುಕ್‌ಗಳನ್ನು ಸರಕಾರಿ ಶಾಲೆಯ ಬಡ ಮಕ್ಕಳಿಗೆ ವಿತರಿಸುತ್ತಿದ್ದರು. ಈ ಬಾರಿಯೂ ಬಡ ಮಕ್ಕಳಿಗೆ ನೋಟ್‌ಬುಕ್, ಬಡ ಹೆಣ್ಣು ಮಕ್ಕಳಿಗೆ 350 ಸೀರೆ ವಿತರಣೆ ಜೊತೆಗೆ ಗ್ರಾಮೀಣ ಕ್ರೀಡೆಗೂ ಪ್ರೋತ್ಸಾಹ ನೀಡುವ ಉದ್ದೇಶದಿಂದ ಈ ಟಗರಿನ ಕಾಳಗ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

8 ಹಲ್ಲಿನ ಟಗರಿನ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನವಾಗಿ ಮೋಟಾರ್ ಬೈಕ್ ನೀಡಲಾಗುತ್ತಿದೆ. ದ್ವಿತೀಯ ಬಹುಮಾನ 25 ಸಾವಿರ ರೂ. ನಗದು ಹಾಗೂ ತೃತೀಯ ಬಹುಮಾನ 11 ಸಾವಿರ ರೂ. ನೀಡಲಾಗುತ್ತದೆ. ಆಸಕ್ತರು ಹೆಚ್ಚಿನ ಮಾಹಿತಿಗಾಗಿ 7676392975 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ವಸಂತ ಕಣವಿ, ಈರಣ್ಣ ಅಣ್ಣಿಗೇರಿ, ಮೋಹನ ಮುದ್ದಿನ ಇತರರು ಉಪಸ್ಥಿತರಿದ್ದರು.

## ವಾರ್ಡ್ ನಂ. 21, 20ರಲ್ಲಿ ವಿಜಯೋತ್ಸವ



■ ವಿಜಯಸಾಕ್ಷಿ ಸುದ್ದಿ, ಗದಗ

ದೇಶದ ಪ್ರಧಾನಮಂತ್ರಿಗಳಾದ ನರೇಂದ್ರ ಮೋದಿಯವರು 3ನೇ ಬಾರಿಗೆ ಪ್ರಧಾನಮಂತ್ರಿಗಳಾಗಿ ಪ್ರಮಾಣವಚನ ಸ್ವೀಕರಿಸುವ ಹಿನ್ನೆಲೆಯಲ್ಲಿ ಗದಗ ನಗರದ ವಾರ್ಡ್ ನಂ– 21, 20ರ ಶ್ರೀ ಗಂಜಿ ಬಸವೇಶ್ವರ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ, ಗಂಜಿ ಬಸವೇಶ್ವರ ಸರ್ಕಲ್‌ನಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ ವಾರ್ಡಿನ ಪ್ರಮುಖರಾದ ಶಂಕರ ಕರಬಿಷ್ಠಿ ನೇತೃತ್ವದಲ್ಲಿ ಸಂಭ್ರಮಾಚರಣೆ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಬಸಪ್ಪ ಪಡಗದ, ಗುರುಶಾಂತಗೌಡ ಮರೀಗೌಡ್ರ, ರಮೇಶ ಕುರ್ತಕೋಟಿ, ಅಂದಪ್ಪ ಬಿಸನಳ್ಳಿ, ಶಿವಪ್ಪ ಮುಳ್ಳಾಳ, ಸೋಮು ಪುರದ, ರೆಹಮನಸಾಬ್ ಮುಲ್ಲಾ, ಇಮಾಮಸಾಬ್ ಉಮಚಗಿ, ಸಿದ್ದಲಿಂಗನಗೌಡ ಉಮಚಗಿ, ಪ್ರಭು ಕಲಬಂಡಿ, ತೋಟಯ್ಯ ವಿಭೂತಿಮಠ, ಸತೀಶ ಗಿಡ್ಡಹನಮಣ್ಣವರ, ಸಂತೋಷ ಹಿರೇಮಠ, ವಿಜಯ ಹಿರೇಮಠ, ಪ್ರಭು ಭದ್ರಾಪೂರಮಠ, ಚನ್ನಬಸನಗೌಡ ಉಮಚಗಿ, ಸಿದ್ಲಿಂಗಪ್ಪ ಗಾಣಗೇರ, ಅಂಬಾಜಿ ಅಂಜೇಕಾನಿ, ಬಸವರಾಜ ಬಳ್ಳಾರಿ, ಮಂಜು ಲಕ್ಕುಂಡಿ, ಮಂಜು ಆಲೂರ, ಪ್ರಭು ವರವಿ, ರಾಜು ಕವಳಿಕಾಯಿ, ವಿರೇಶ ಸಾಲಿಮಠ, ರಾಚಪ್ಪ ಲಕ್ಕುಂಡಿ, ನಾಗಪ್ಪ ಹುಂಬಿ, ಮಂಜುನಾಥ ಪುರದ, ಸುರೇಶ ಟರ್ಕಿ, ಲಕ್ಷ್ಮಣ ವಾಲ್ಮೀಕಿ, ನಿಜಲಿಂಗಪ್ಪ ಅಗಸಿಬಾಗಿಲು, ಶಿವು ಕುಂಬಾರ, ಸಿದ್ದು ಸಾಲಿಮಠ, ಗಣೇಶ ಲಕ್ಕುಂಡಿ, ಪ್ರವೀಣ ಬಂಗಾರಿ, ಶಿವಾನಂದ ಅಬ್ಬಿಗೇರಿ, ಮನೋಜ ವಾಲ್ಮೀಕಿ, ಸೋನು ಮಳಿಮಠ, ಕಿರಣ ನವಲಗುಂದ, ಈಶ್ವರ ನಾಯ್ಕರ, ಅಂದಪ್ಪ ಮುಳ್ಳಾಳ, ಮಲ್ಲಿಕಾರ್ಜುನ ನಾವಳ್ಳಿ, ಪುಟ್ಟು ಕಳಸಣ್ಣವರ, ಸಂತೋಷ ರಸಾಳಕರ, ಶೇಖಪ್ಪ ಹದ್ಲಿಗಿ, ಲಕ್ಷ್ಮಣ ಮುರಗೋಡ, ಬಸವರಾಜ ಕಂಠಿ, ಬಸವರಾಜ ಮೆಣಸಗಿ, ಶರಣಪ್ಪ ತಾಂಬೆ, ರಾಚಪ್ಪ ಹುಂಬಿ ಮುಂತಾದವರು ಉಪಸ್ಥಿತರಿದ್ದರು.

## ಹೊಸ ಕ್ರಿಮಿನಲ್ ಕಾನೂನುಗಳ ಕುರಿತು ಕಾರ್ಯಾಗಾರ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಜಿಲ್ಲಾ ಪೊಲೀಸ್, ಜಿಲ್ಲಾ ಸತ್ರ ನ್ಯಾಯಾಲಯ ಧಾರವಾಡ, ಕಂದಾಯ ಇಲಾಖೆ ಧಾರವಾಡ, ಹುರುಕಡ್ಲಿ ಅಜ್ಜ ಕಾನೂನು ಮಹಾ ವಿದ್ಯಾಲಯ ಧಾರವಾಡ ಇವರ ಸಹಯೋಗದಲ್ಲಿ ಧಾರವಾಡದ ಕರ್ನಾಟಕ ಕಾಲೇಜ್ ಆವರಣದಲ್ಲಿರುವ ಸೃಜನ ರಂಗಮಂದಿರದಲ್ಲಿ 3 ಹೊಸ ಕ್ರಿಮಿನಲ್ ಕಾನೂನುಗಳ ಬಗ್ಗೆ ಒಂದು ದಿನದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು.



ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಬೆಂಗಳೂರು ಕರ್ನಾಟಕ ಉಚ್ಚ ನ್ಯಾಯಾಲಯದ ವಕೀಲರಾದ ಮಲ್ಲಿಕಾರ್ಜುನ ಆರ್.ಎಂ, ಬೆಂಗಳೂರು ಕೆಎಲ್‌ಇ ಲಾ ಕಾಲೇಜ್ ಪ್ರೋಫೆಸರ್ ಡಾ. ಎಸ್.ಜಿ. ಗೌಡಪ್ಪಗೌಡರ್, ಬೆಂಗಳೂರು ಕರ್ನಾಟಕ ಉಚ್ಚ ನ್ಯಾಯಾಲಯದ ವಕೀಲರಾದ ಮಧುಸೂದನ್ ಇವರು ಹೊಸ ಕಾನೂನುಗಳ ವಿಷಯದ ಬಗ್ಗೆ ಮಂಡಿಸಿದರು.

ಕಾರ್ಯಾಗಾರವನ್ನು ಪ್ರಿನ್ಸಿಪಲ್ ಜಿಲ್ಲಾ ಸತ್ರ ನ್ಯಾಯಾಲಯದ ನ್ಯಾಯಾಧೀಶೆ ಕೆ.ಜಿ. ಶಾಂತಿ ಉದ್ಘಾಟಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎನ್.ವಿ. ಬರಮನಿ, ಪ್ರಾಂಶುಪಾಲ ಎಂ.ಎಂ. ಯಾದವಾಡ, ಪಿಟಿಎಸ್‌ನ ಅಧಿಕಾರಿ ಹಾಗೂ ಸಿಬ್ಬಂದಿಗಳು, ಆಂತರಿಕ ಭದ್ರತಾ ವಿಭಾಗದ ಅಧಿಕಾರಿ, ರಾಜ್ಯ ಗುಪ್ತವಾರ್ತೆ ಅಧಿಕಾರಿ, ಲೋಕಾಯುಕ್ತ ಇಲಾಖೆಯ ಅಧಿಕಾರಿ, ಜಿಲ್ಲೆಯ ತಹಸೀಲ್ದಾರ ಹಂತದ ಅಧಿಕಾರಿಗಳು, ಕರ್ನಾಟಕ ಕಾಲೇಜಿನ ಕಲಾ, ವಿಜ್ಞಾನ ವಿಭಾಗದ ವಿದ್ಯಾರ್ಥಿಗಳು ಹಾಗೂ ಹುರುಕಡ್ಲಿ ಅಜ್ಜ ಕಾನೂನು ಮಹಾವಿದ್ಯಾಲಯದ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ರಾಷ್ಟ್ರೀಯ ಒಲಂಪಿಯಾಡ್ ಸ್ಪರ್ಧೆಯಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಮೇ 31ರಂದು ಬಾಷಲ್ ಮಿಶನ್ ಬಾಲಕಿರ ಪ್ರೌಢಶಾಲೆಯಲ್ಲಿ ಉಪನಿರ್ದೇಶಕರ ಕಾರ್ಯಾಲಯ, ಶಾಲಾ ಶಿಕ್ಷಣ ಇಲಾಖೆ ಧಾರವಾಡ ಇವರು ಏರ್ಪಡಿಸಿದ್ದ ರಾಷ್ಟ್ರೀಯ ಯೋಗ ಒಲಂಪಿಯಾಡ್ ಸ್ಪರ್ಧೆಯಲ್ಲಿ ಎನ್.ಎ. ಮುತ್ತಣ್ಣ ಸ್ಮಾರಕ ಪೊಲೀಸ್ ಮಕ್ಕಳ ಶಾಲೆಯ ವಿದ್ಯಾರ್ಥಿ ವಿಜಯ್ ಅರಳಿಕಟ್ಟಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ್ ಅವರು ಆಯ್ಕೆಯಾದ ವಿದ್ಯಾರ್ಥಿಗೆ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಶಾಲೆಯ ಪ್ರಾಚಾರ್ಯ ಡಾ. ಎಸ್.ಓ. ಬಿರಾದರ, ಯೋಗ ಶಿಕ್ಷಕರಾದ ಡಾ. ಪ್ರಕಾಶ ಪವಾಡಶೆಟ್ಟಿ, ದೈಹಿಕ ಶಿಕ್ಷಕರಾದ ಪಿ.ಡಿ. ರೋಣದ ಉಪಸ್ಥಿತರಿದ್ದರು.

## ಬಿಜೆಪಿ ಯುವ ಮೋರ್ಚಾ ವತಿಯಿಂದ ವಿಜಯೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ನರೇಂದ್ರ ಮೋದಿಯವರು 3ನೇ ಬಾರಿಗೆ ಪ್ರಧಾನ ಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಭಾರತೀಯ ಜನತಾ ಪಕ್ಷದ ಗದಗ ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ ನೇತೃತ್ವದಲ್ಲಿ ಗದುಗಿನ ಮಂಜುನಾಥ ಶಿಕ್ಷಣ ಸಂಸ್ಥೆಯ ಬುದ್ಧಿಮಾಂದ್ಯ ಮಕ್ಕಳ ವಿಶೇಷ ವಸತಿ ಶಾಲೆಯಲ್ಲಿ ಪ್ರಸಾದದ ವ್ಯವಸ್ಥೆ ಹಮ್ಮಿಕೊಂಡಿದ್ದರು.



ಈ ಸಂದರ್ಭದಲ್ಲಿ ಗದಗ ನಗರ ಅಧ್ಯಕ್ಷ ಅನಿಲ್ ಅಬ್ಬಿಗೇರಿ, ನವೀನ್ ಜಾಲಿಹಾಳ್, ವೆಂಕಟೇಶ ಹಬೀಬ್, ನವೀನ್ ಕೊಟ್ನೆಕಲ್, ಸಾಗರ್ ಪಾಪನಾಳ್, ಅರುಣ ಹುಲ್ಲೂರ ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಶಶಿಧರ ಗೌಡ ಕಳ್ಳಿ ಮತ್ತು ಕಾರ್ತಿಕ್ ಶಿಗ್ಲಿಮಠ ಆಯೋಜಿಸಿದ್ದರು. ಭಾರತೀಯ ಜನತಾ ಪಕ್ಷದ ಯುವ ಮೋರ್ಚಾ ಕಾರ್ಯಕರ್ತರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಮಣಿಪುರ ಹಿಂಸಾಚಾರ: ಮುಖ್ಯಮಂತ್ರಿ ಬಿರೇನ್ ಸಿಂಗ್ ಬೆಂಗಾವಲು ಪಡೆಯ ಮೇಲೆ ದಾಳಿ

■ ವಿಜಯಸಾಕ್ಷಿ ಸುದ್ದಿ, ಮಣಿಪುರ

ಶಂಕಿತ ಉಗ್ರರು ಸೋಮವಾರ ಕಾಂಗ್‌ಪೋಕ್ಪಿ ಜಿಲ್ಲೆಯಲ್ಲಿ ಮಣಿಪುರ ಮುಖ್ಯಮಂತ್ರಿ ಎನ್ ಬಿರೇನ್ ಸಿಂಗ್ ಅವರ ಮುಂಗಡ ಭದ್ರತಾ ಬೆಂಗಾವಲು ಪಡೆಯ ಮೇಲೆ ಹೊಂಚುದಾಳಿ ನಡೆಸಿದ್ದಾರೆ. ದಾಳಿ ನಡೆದಾಗ ಬೆಂಗಾವಲು ಪಡೆ ಹಿಂಸಾಚಾರ ಪೀಡಿತ ಜಿರಿಬಾಮ್ ಜಿಲ್ಲೆಗೆ ತೆರಳುತ್ತಿತ್ತು. ಭದ್ರತಾ ಪಡೆಗಳ ವಾಹನಗಳ ಮೇಲೆ ಹಲವು ಬಾರಿ ಗುಂಡಿನ ದಾಳಿ ನಡೆಸಲಾಯಿತು. ಭದ್ರತಾ ಸಿಬ್ಬಂದಿ ಪ್ರತಿದಾಳಿ ನಡೆಸಿದರು ಮತ್ತು ರಾಷ್ಟ್ರೀಯ ಹೆದ್ದಾರಿ 53 ರ ಉದ್ದಕ್ಕೂ ಕೋಟ್ಲೆನ್ ಗ್ರಾಮದ ಬಳಿ ಗುಂಡಿನ ಚಕಮಕಿ ಮುಂದುವರೆದಿದೆ.

ಹೊಂಚುದಾಳಿಯಲ್ಲಿ ಕನಿಷ್ಠ ಒಬ್ಬ ಭದ್ರತಾ ಸಿಬ್ಬಂದಿಗೆ ಬುಲೆಟ್ ಗಾಯಗಳಾಗಿವೆ ಎಂದು ಪೊಲೀಸ್ ಮೂಲಗಳನ್ನು ಉಲ್ಲೇಖಿಸಿ ಮಾಧ್ಯಮಗಳು ವರದಿ ಮಾಡಿವೆ.

ದೆಹಲಿಯಿಂದ ಇಂಫಾಲ್‌ಗೆ ಹಿಂದಿರುಗುತ್ತಿದ್ದ ಮುಖ್ಯಮಂತ್ರಿ ಬಿರೇನ್ ಸಿಂಗ್, ಇತ್ತೀಚಿನ ಹಿಂಸಾತ್ಮಕ ಘಟನೆಗಳ ನಂತರ ಪರಿಸ್ಥಿತಿಯನ್ನು ಅವಲೋಕಿಸಲು ಜಿರಿಬಾಮ್‌ಗೆ ಭೇಟಿ ನೀಡಲು ಯೋಜಿಸಿದ್ದರು. ಶನಿವಾರ ಶಂಕಿತ ಉಗ್ರರು ಜಿರಿಬಾಮ್‌ನಲ್ಲಿ ಎರಡು ಪೊಲೀಸ್ ಔಟ್‌ಪೋಸ್ಟ್‌ಗಳು, ಅರಣ್ಯ ಬೀಟ್ ಕಚೇರಿ ಮತ್ತು ಕನಿಷ್ಠ 70 ಮನೆಗಳಿಗೆ ಬೆಂಕಿ ಹಚ್ಚಿದ್ದಾರೆ.

ಈ ಪ್ರದೇಶದಲ್ಲಿ ಹೆಚ್ಚುತ್ತಿರುವ ಹಿಂಸಾಚಾರದ ಮಧ್ಯೆ ಹೊಂಚುದಾಳಿ ನಡೆದಿದೆ. ಜೂನ್ 6 ರಂದು ವಾರಗಟ್ಟಲೆ ನಾಪತ್ತೆಯಾಗಿದ್ದ 59 ವರ್ಷದ ಮೈಟೈ ರೈತ ಸೋಬಮ್ ಶರತ್‌ಕುಮಾರ್ ಸಿಂಗ್ ಅವರ ಮೃತದೇಹ ಪತ್ತೆಯಾದ ನಂತರ ಉದ್ವಿಗ್ನತೆ ಹೆಚ್ಚಾಯಿತು. ಇದು ಹಿಂಸಾಚಾರದ ಉಲ್ಬಣಕ್ಕೆ ಕಾರಣವಾಯಿತು ಮತ್ತು ವರ್ಧಿತ ಭದ್ರತಾ ಕ್ರಮಗಳ ಬೇಡಿಕೆಗಳಿಗೆ ಕಾರಣವಾಯಿತು.

## ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ಪರಿಸರ ದಿನಾಚರಣೆ ನಿಮಿತ್ತ ಇಲ್ಲಿನ ಮಹಾಂತ ಬಳಗದ ವತಿಯಿಂದ ಗಿಡ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ತೋಂಟದಾರ್ಯ ಮಠದ ವ್ಯವಸ್ಥಾಪಕರಾದ ಮಲ್ಲಿಕಾರ್ಜುನ ಅಂಗಡಿಯವರು ಸಸಿಗಳನ್ನು ನೆಟ್ಟು ಮಾತನಾಡಿ, ಪರಿಸರ ಸಂರಕ್ಷಣೆ ಮಾಡುವ ಹೊಣೆಗಾರಿಕೆ ನಮ್ಮೆಲ್ಲರದ್ದಾಗಿದೆ. ಪರಿಸರದ ಬಗ್ಗೆ ಪ್ರತಿಯೊಬ್ಬರೂ ಜಾಗೃತಿ ವಹಿಸಬೇಕು. ತಮ್ಮ ತಮ್ಮ ಮನೆಗಳಲ್ಲಿ, ಅಕ್ಕ ಪಕ್ಕ ಖಾಲಿ ಇರುವ ಜಾಗೆಗಳಲ್ಲಿ ಸಾಧ್ಯವಾದಷ್ಟು ಹೆಚ್ಚು ಗಿಡಮರಗಳನ್ನು ಬೆಳೆಸಬೇಕು ಎಂದರು.

ಗದಗ–ಬೆಟಗೇರಿ ನಗರಸಭೆ ಸದಸ್ಯ ಪ್ರಕಾಶ ಅಂಗಡಿ ಸಸಿಗಳನ್ನು ನೆಟ್ಟು ಮಾತನಾಡಿ, ಪ್ರಾಣಿ–ಪಕ್ಷಿಗಳು ಮಾನವ ಸೇರಿದಂತೆ ಭೂಮಿಯ ಮೇಲಿನ ಪ್ರತಿಯೊಂದು ಜೀವಸಂಕುಲ ಆಹಾರ, ಗಾಳಿ, ನೀರು ಮತ್ತು ಪರಿಸರವನ್ನು ಅವಲಂಬಿಸಿವೆ. ಪರಿಸರವನ್ನು ಬೆಳೆಸಿ ಉಳಿಸಿಕೊಳ್ಳುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯ ಎಂದರು.

ಈ ಸಂದರ್ಭದಲ್ಲಿ ಚೇತನ ಅಂಗಡಿ, ಚಂದ್ರಣ್ಣ ತಡಸದ, ರವಿ ಮುದಗಲ್ಲ, ಸುರೇಶ ಬಡಿಗೇರ, ಬಸನಗೌಡ ನಿಂಬನಗೌಡರ, ರಾಜು ಗಡಾದ, ಶರಣು ದೊಡ್ಡೂರ, ದೇವಪ್ಪ ಮುಗಳಿ, ಪ್ರದೀಪ ಕಡಿವಾಲ, ಮಂಜುನಾಥ ಗುರುಪುತ್ರನವರ, ಸಂಗಮೇಶ ಹುರುಳಿ ಮುಂತಾದವರು ಸಸಿಗಳನ್ನು ನೆಟ್ಟರು.

## ಸಾಧಕರಿಗೆ ಸನ್ಮಾನ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ನರೇಂದ್ರ ಮೋದಿಯವರು ಪ್ರಧಾನ ಮಂತ್ರಿಗಳಾಗಿ ಅಧಿಕಾರ ಸ್ವೀಕರಿಸಿದ ನಿಮಿತ್ತ ಗದಗ–ಬೆಟಗೇರಿ ನಗರಸಭೆ ವಾರ್ಡ್ ನಂ. 13ರಲ್ಲಿ ನಗರಸಭೆ ಸದಸ್ಯ ಮುತ್ತು ಮುಶಿಗೇರಿ ನೇತೃತ್ವದಲ್ಲಿ ನಿವೃತ್ತ ವೀರಯೋಧರಿಗೆ, ವಾರ್ಡಿನಲ್ಲಿ ಅಯೋಧ್ಯೆ ಶ್ರೀರಾಮ ಮಂದಿರ ಪ್ರವಾಸ ಕೈಗೊಂಡು ಬಂದಿರುವ ಹಾಗೂ ವಾರ್ಡಿನಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮ ಜರುಗಿತು.




ಈ ಸಂದರ್ಭದಲ್ಲಿ ಮುತ್ತು ಮುಶಿಗೇರಿ ಮಾತನಾಡಿ, ನರೇಂದ್ರ ಮೋದಿಯವರು ಸತತ ಮೂರನೇ ಬಾರಿಗೆ ಪ್ರಧಾನ ಮಂತ್ರಿಯಾಗಿ ಅಧಿಕಾರ ಸ್ವೀಕರಿಸುತ್ತಿರುವ ಈ ಸಂದರ್ಭದಲ್ಲಿ ದೇಶ ಸೇವೆಗೈದ ನಿವೃತ್ತ ಯೋಧರಿಗೆ, ಅಯೋಧ್ಯೆಗೆ ತೆರಳಿ ಶ್ರೀರಾಮನ ದರ್ಶನ ಪಡೆದ ಭಕ್ತರಿಗೆ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸುತ್ತಿರುವುದು ಸಂತಸ ತಂದಿದೆ ಎಂದರು.

ಕಾರ್ಯಕ್ರಮದಲ್ಲಿ ಪ್ರಕಾಶಗೌಡ ಕೆಂಚನಗೌಡ್ರ, ಹುಲಪ್ಪ ತಿಮ್ಮಣ್ಣ ಹೊಸಮನಿ, ನಿಂಗಪ್ಪ ಕಲಕೇರಿ, ಮಹಾದೇವಪ್ಪ ಬಟ್ಟಾರ, ಶಂಕರಮ್ಮ ಬಟ್ಟಾರ, ಜಯಶ್ರೀ ಅಣ್ಣಿಗೇರಿ, ರಾಜಶೇಖರ ಅಣ್ಣಿಗೇರಿ, ಅಂಜಲಿ ಪಮ್ಮಾರ, ಸಾಕ್ಷಿ ಚೆಂಡ್ರಿ, ಶುಭಾಂಗಿ ದಹಿಂಡೆ, ವೀಣಾ ಸಿಂದೋಗಿ, ವೈಷ್ಣವಿ ಇಟಗಿ, ವರುಣ ಕಾಮತ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ನಾಗರಾಜ ಉಮಚಗಿ ಕಾರ್ಯಕ್ರಮ ನಿರೂಪಿಸಿದರು. ಹಿರಿಯ ಮುಖಂಡರಾದ ಗುರುರಾಜ ತಿಲ್ಲಿಹಾಳ, ಮಂಜುನಾಥ ಕೋಟ್ನಿಕಲ್, ಬಸಪ್ಪ ರಣತೂರ, ಶೃತಿ ಮುತ್ತು ಮುಶಿಗೇರಿ, ರಾಘವೇಂದ್ರ ಗೌಡರ, ಹೊಸಮನಿ, ಮಠಪತಿ, ಬಟ್ಟೂರ ಸಹೋದರರು ಸೇರಿದಂತೆ ವಾರ್ಡಿನ ಗುರುಹಿರಿಯರು, ಮಹಿಳೆಯರು ಉಪಸ್ಥಿತರಿದ್ದರು.

## 7 ರಾಜ್ಯಗಳ 13 ವಿಧಾನಸಭಾ ಕ್ಷೇತ್ರಗಳಿಗೆ ಉಪ ಚುನಾವಣೆ ದಿನಾಂಕ ಘೋಷಣೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ಬಿಹಾರ, ಪಶ್ಚಿಮ ಬಂಗಾಳ, ತಮಿಳುನಾಡು, ಮಧ್ಯಪ್ರದೇಶ, ಉತ್ತರಾಖಂಡ, ಪಂಜಾಬ್ ಮತ್ತು ಹಿಮಾಚಲ ಪ್ರದೇಶದ 13 ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯ ದಿನಾಂಕಗಳನ್ನು ಭಾರತೀಯ ಚುನಾವಣಾ ಆಯೋಗ (ಇಸಿಐ) ಪ್ರಕಟಿಸಿದೆ.

ಜುಲೈ 10 ರಂದು ಮತದಾನ ನಡೆಯಲಿದ್ದು, ಜುಲೈ 13 ರಂದು ಮತ ಎಣಿಕೆ ನಡೆಯಲಿದೆ. ಚುನಾವಣಾ ಆಯೋಗದ ಅಧಿಸೂಚನೆಯ ಪ್ರಕಾರ, ನಾಮಪತ್ರ ಸಲ್ಲಿಸಲು ಜೂನ್ 21 ಕೊನೆಯ ದಿನಾಂಕವಾಗಿದ್ದು, ಉಮೇದುವಾರಿಕೆ ಹಿಂಪಡೆಯಲು ಜೂನ್ 26 ಕೊನೆಯ ದಿನವಾಗಿದೆ.

**ಉಪಚುನಾವಣೆ ನಡೆಯಲಿರುವ ಕ್ಷೇತ್ರಗಳ ಮಾಹಿತಿ ಇಲ್ಲಿದೆ :** ಬಿಹಾರದ ರುಪೌಲಿ, ಪಶ್ಚಿಮ ಬಂಗಾಳದ ರಾಣಾಘಾಟ್ ದಕ್ಷಿಣ, ಬಾಗ್ದಾ, ಮಾಣಿಕ್ತಾಲಾ, ರಾಯ್‌ಗಂಜ್, ತಮಿಳುನಾಡಿನ ವಿಕ್ರಾವಂಡಿ, ಮಧ್ಯಪ್ರದೇಶದ ಅಮರ್‌ವಾರ, ಉತ್ತರಾಖಂಡದ ಬದ್ರಿನಾಥ್, ಮಂಗಳೂರ್, ಪಂಜಾಬ್‌ನ ಜಲಂದರ್ ವೆಸ್ಟ್, ದೆಹ್ರಾ, ಹಿಮಾಚಲ ಪ್ರದೇಶದ ಹಮೀರ್‌ಪುರ್, ನಲಗಢ

## ನಿಧನ ವಾರ್ತೆ



### ಸಾಯಿಪ್ರಕಾಶ್ ಹೊಂಬಳ

**ಗದಗ:** ನಗರದ ಸರ್ವೋದಯ ಕಾಲೋನಿ ನಿವಾಸಿ ಸಾಯಿಪ್ರಕಾಶ ಅರುಣಕುಮಾರ ಹೊಂಬಳ( 22) ಇವರು ಸೋಮವಾರ ನಿಧನ ಹೊಂದಿದರು.

ಮೃತರಿಗೆ ತಂದೆ, ತಾಯಿ, ಅಜ್ಜ, ಅಜ್ಜಿ ಹಾಗೂ ಅಪಾರ ಬಂಧು–ಬಳಗವಿದೆ.

ಮೃತರ ಅಂತ್ಯಕ್ರಿಯೆ ಸೋಮವಾರ ಸಂಜೆ ಜರುಗಿತು.

## ಕರವೇ ಕಾರ್ಯಕರ್ತರಿಂದ ವಸ್ತ್ರ ವಿತರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡರ 58ನೇ ಜನ್ಮದಿನದ ಅಂಗವಾಗಿ ಕರವೇ ಕಾರ್ಯಕರ್ತರು ನಗರದ ಗಾಂಧಿ ವೃತ್ತದ ಬಳಿ ಬಡವರಿಗೆ ಸೀರೆ, ಪ್ಯಾಂಟ್–ಶರ್ಟ್ ಹಾಗೂ ಉಪಹಾರದ ಜೊತೆಗೆ ಸಿಹಿ ವಿತರಣೆ ಮಾಡಿ ವಿಭಿನ್ನವಾಗಿ ಆಚರಿಸಿದರು.



ಈಸಂದರ್ಭದಲ್ಲಿ ಮುಖಂಡರಾದ ವಿನಾಯಕ ಬದಿ, ದಾವಲಸಾಬ್ ತಹಸಿಲ್ದಾರ್, ವಿರುಪಾಕ್ಷ ಹಿತ್ತಲಮನಿ, ಬಸವರಾಜ್ ಮೇಟಿ, ಆಶಾ ಜೂಲಗಡ್ಡ, ಹುಸೇನಬಿ ಬೂದಿಹಾಳ, ಕೃಷ್ಣ ಲಮಾಣಿ, ಮಾರುತಿ ಈಳಿಗೆರೆ, ಕುಮಾರ್ ರೇವಣ್ಣವರ್, ಮಹಾಂತೇಶ್ ನಡಿಗೇರ್, ಸಲೀಂ ಬೋದ್ಲೆಖಾನ್, ನಿಯಾಜ್ ಶೇಖ್, ಹುಸೇನ್ ಅಕ್ಕಿ, ಸಲೀಂ ಸಿರವಾರ, ಪ್ರಕಾಶ್ ಗಡದವರು, ಮುಬಾರಕ್ ಮುಲ್ಲಾ, ತೌಶಿಫ್ ಡಾಲಾಯತ್, ಆನಂದ್ ಹಂಡಿ, ಆದಿ ಪಾಟೀಲ, ಅಕ್ಬರ್ ಸರ್ಕಸ್, ಸಮೀರ್ ಬಾಳೆಕಾಯಿ, ಗೌಸ್ ಶಿರಹಟ್ಟಿ, ಇಸಾಕ್ ನದಾಫ್, ರವಿ ಮಲ್ಲಾಡದ, ಸುಲೇಮಾನ್ ಮಂಜಲಾಪುರ್, ಸದ್ದಾಂ ತಹಸೀಲ್ದಾರ್, ಯಲ್ಲೇಶ್ ಬಳ್ಳಾರಿ, ಜಾಫರ್, ಸುಹೇಲ್ ನಾಲಬಂದ್ ಮುಂತಾದವರಿದ್ದರು.

# ರಾಜ್ಯ ಮಟ್ಟದ ಟಗರಿನ ಕಾಳಗ ಜೂ.13ಕ್ಕೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯದ ಮೈದಾನದಲ್ಲಿ ಜೂನ್ 13ರ ಸಾಯಂಕಾಲ 4 ಗಂಟೆಗೆ ಬಸವರಾಜ ಹಾರೋಗೇರಿ ಇವರ ಜನ್ಮದಿನದ ನಿಮಿತ್ತ ರಾಜ್ಯ ಮಟ್ಟದ ಟಗರಿನ ಕಾಳಗ ಏರ್ಪಡಿಸಲಾಗಿದೆ.

ಆಸಕ್ತರು ಮೊಬೈಲ್ ಸಂಖ್ಯೆ: 7676392975, 9972301517, 9164078697, 9620501302, 8123369005 ಸಂಪರ್ಕಿಸಲು ಕೊರಲಾಗಿದೆ ಎಂದು ಬಸವರಾಜ ಹಾರೋಗೇರಿ ಪ್ರಕಟಣೆಗೆ ತಿಳಿಸಿದ್ದಾರೆ.

# ರಥಬೀದಿ ತೆರವಿಗೆ ಒತ್ತಾಯಿಸಿ ಧರಣಿ




■ ವಿಜಯಸಾಕ್ಷಿ ಸುದ್ದಿ, ಗದಗ

ತೋಂಟದಾರ್ಯ ಮಠದ ಜಾತ್ರೆ ನಂತರ ರಥಬೀದಿಯಲ್ಲಿ ನಡೆಯುತ್ತಿರುವ ಅಕ್ರಮ ವ್ಯಾಪಾರ ವಹಿವಾಟನ್ನು ಸ್ಥಗಿತಗೊಳಿಸುವಂತೆ ಒತ್ತಾಯಿಸಿ ದಲಿತ ಮಿತ್ರ ಮೇಳ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ಆರಂಭಿಸಿದೆ.

ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ನಡೆಸಿರುವ ದಲಿತ ಮಿತ್ರ ಮೇಳದ ಸದಸ್ಯರು, ಈ ಹಿಂದೆ ತೋಂಟದಾರ್ಯ ಮಠದ ಜಾತ್ರೆ ನಂತರ 5 ದಿನ ವ್ಯಾಪಾರ ವಹಿವಾಟು ನಡೆಯುತ್ತಿತ್ತು. ಕೆಲ ವರ್ಷಗಳಿಂದ 10-15 ದಿನ ನಡೆಯುತ್ತಿತ್ತು. ಆದರೆ ಸದ್ಯ ರಥೋತ್ಸವ ಮುಗಿದು 2 ತಿಂಗಳು ಕಳೆದರೂ ಅಲ್ಲಿ ವ್ಯಾಪಾರ ವಹಿವಾಟು ನಡೆಸುತ್ತಿದ್ದಾರೆ ಎಂದು ಆರೋಪಿಸಿದರು.

ಈ ಅಕ್ರಮ ವ್ಯಾಪಾರ ವಹಿವಾಟಿನಿಂದ ಸಂಚಾರ ದಟ್ಟಣೆ ಹೆಚ್ಚಾಗಿದೆ. ಸ್ಥಳೀಯ ಬೀದಿ ಬದಿ ವ್ಯಾಪಾರಸ್ಥರು ಬೀದಿಗೆ ಬರುವಂತಾಗಿದೆ. ಕೇವಲ 10 ದಿನ ಪರವಾನಗಿ ಪಡೆದು 2 ತಿಂಗಳಿಂದ ಭೂ ಬಾಡಿಗೆಯೂ ಇಲ್ಲದೇ ವ್ಯಾಪಾರ ನಡೆಸುತ್ತಿದ್ದಾರೆ. ಇದಕ್ಕೆಲ್ಲಾ ಜಾತ್ರಾ ಕಮಿಟಿ ಕಾರಣವಾಗಿದೆ. ಈ ಕೂಡಲೇ ಜಿಲ್ಲಾಧಿಕಾರಿಗಳು ರಥಬೀದಿಯನ್ನು ತೆರವುಗೊಳಿಸಿ ಸಂಚಾರಕ್ಕೆ ಮುಕ್ತಗೊಳಿಸಬೇಕು. ಸ್ಥಳೀಯ ವ್ಯಾಪಾರಸ್ಥರಿಗೆ ಅನುಕೂಲ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ದಲಿತ ಮಿತ್ರ ಮೇಳದ ಅಧ್ಯಕ್ಷ ಕುಮಾರ ನಡಗೇರಿ, ಹುಲುಗಪ್ಪ ವಾಲ್ಮೀಕಿ, ವೆಂಕಟೇಶ ದೊಡ್ಡಮನೆ, ಶಶಿಕುಮಾರ ಹಾಕ್ರಿಕಿ, ಅನಿಲ ಮುಳ್ಳಾಳ, ಶಿವು ಬಂಗಾರಿ, ಬಸವರಾಜ ನವಲಿ, ನೂತನ ಮುರಗೋಡ, ಮಂಜು ವಾಲ್ಮೀಕಿ, ಬಸವರಾಜ ಬನ್ನಿಮರದ, ಸಂತೋಷ ಕುರಿ, ಪುಟ್ಟರಾಜ ಕಳಸಣ್ಣವರ ಉಪಸ್ಥಿತರಿದ್ದರು.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ ಗದಗ, ಕಣವಿ ಮತ್ತು ಸೊರಟೂರು ಸೇರಿದಂತೆ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ಗದಗದಲ್ಲಿ 2024-25 ನೇ ಸಾಲಿನಲ್ಲಿ ಖಾಲಿಯಿರುವ ಸ್ಥಳಗಳಿಗೆ ಅರ್ಹ ಪರಿಶಿಷ್ಟ ಜಾತಿ ಮತ್ತು ಪಂಗಡ ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯವರಿಗೆ ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ಜಾಲತಾಣ, ಶಿ.kar.nic.in ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿಯನ್ನು ಮುಖ್ಯೋಪಾಧ್ಯಯರಿಂದ ಧೃಡೀಕರಿಸಿ ಅಗತ್ಯ ದಾಖಲೆಗಳೊಂದಿಗೆ ಕಾರ್ಯಾಲಯಕ್ಕೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಗದಗ ಹಾಗೂ 08372-297258 ಮತ್ತು 9480843128 ನ್ನು ಸಂಪರ್ಕಿಸಬಹುದಾಗಿದೆ.

# ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜೂನ್ 11ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ**

ವಾರ್ಡ್ ನಂ. 29ರಲ್ಲಿ ಗುಂಪಿನ ಮನೆ, ಭಾಂಡಗೆ ಲೈನ್, ಪೊಲೀಸ್ ಸ್ಟೇಷನ್ ಕೆಳಗಿನ ಭಾಗ, ವಾರ್ಡ್ ನಂ. 1ರಲ್ಲಿಎಸ್.ಎಮ್.ಕೃಷ್ಣಾ ನಗರ ಮೇಲಿನ ಭಾಗ, ಕೆಳಗಿನ ಭಾಗ,

ವಾರ್ಡ್ ನಂ. 3ರಲ್ಲಿಜಮಾದಾರ ನಗರ, ಗಿರಣಿ ಲೈನ್, ದುರ್ಗಣ್ಣವರ ಪ್ಲಾಟ್, ವಹಿದಾವರ ಲೈನ್, ಈಶ್ವರ ಗುಡಿ ಲೈನ್, ಸ್ವಾಮಿಯವರ ಲೈನ್, ಜಮಾದಾರ ಪೂರ್ತಿ ಭಾಗ, ವಾರ್ಡ್ ನಂ. 21ರಲ್ಲಿ ವಾಲ್ಮೀಕಿ ಭವನ, ಶಿಗ್ಗಾಂವಿ ಲೇಔಟ್, ಕರುಗಲ್ ಲೇಔಟ್, ಕಮತರ ಪ್ಲಾಟ್, ವಿಜಯನಗರ ಭಾಗಗಳು, ಕೆಲವು ಉಳಿದ ಭಾಗಗಳು

ವಾರ್ಡ್ ನಂ. 10, 6ರಲ್ಲಿ ಸಿಹಿನೀರಿನ ಭಾವಿ ಸೆಟ್, ವಕ್ಕಲಗೇರಿ ಓಣಿ, ಕಿಲ್ಲಾ ಓಣಿ, ಗಾರ್ಗಿ ಪೇಟೆ, ನದಾಫ್ ಗಲ್ಲಿ, ಯಾತಾಳಿ ಚನ್ನಬಸಪ್ಪನ ಗುಡಿ ಲೈನ್, ಕಲ್ಮನಿಯವರ ಲೈನ್, ಮಸೂತಿ ಲೈನ್, ಮುಳಗುಂದರ ಲೈನ್, ಮಾನೆದಾರ ಲೇಔಟ್, ಗಣಚಾರಿ ಅವರ ಲೇಔಟ್, ಮಲ್ಲಿಕಾರ್ಜುನ ಗುಡಿ ಲೈನ್, ಉಳಿದ ಕೆಲವು ಭಾಗಗಳು.

ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಲ್ಲಿ ನಗರಸಭೆಯಿಂದ ವಿನಂತಿಸಿಕೊಳ್ಳುವುದೇನೆಂದರೆ ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೇರಳದ ದಂಪತಿಗೆ ದತ್ತು ಮಗುವಾಗಿ ಗದುಗಿನ ಹೆಣ್ಣು ಮಗು ಹಸ್ತಾಂತರಿಸಿದ ಡಿಸಿ ವೈಶಾಲಿ ಎಂ.ಎಲ್

# ಆದರ್ಶ ಮಕ್ಕಳು ಸಮಾಜವನ್ನು ಬೆಳಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮಗುವನ್ನು ದತ್ತು ಪಡೆದ ದಂಪತಿಗಳು ಮಗುವಿಗೆ ಒಳ್ಳೆ ಸಂಸ್ಕಾರ, ಸಂಸ್ಕೃತಿಯೊಂದಿಗೆ ಉತ್ತಮ ಶಿಕ್ಷಣ ನೀಡಿ ಆದರ್ಶ ವ್ಯಕ್ತಿಯನ್ನಾಗಿ ಮಾಡಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಹೇಳಿದರು.

ಅವರು ಸೋಮವಾರ ಬೆಟಗೇರಿಯ ಸೇವಾಭಾರತಿ ಟ್ರಸ್ಟ್‌ನ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಸಂಸ್ಥೆಯಲ್ಲಿ ಪೋಷಣೆಗೊಂಡ ಮಗುವನ್ನು ಕೇರಳದ ಮಕ್ಕಳಿಲ್ಲದ ದಂಪತಿಗೆ ಕಾನೂನಿನಡಿ ಹಸ್ತಾಂತರಿಸಿ ಮಾತನಾಡಿದರು.

ಬೇರೆ ರೀತಿಯ ಸಂಬಂಧಗಳಿಂದಾಗಿ ಜನಿಸುವ, ಹೆತ್ತವರಿಗೆ ಬೇಡವಾಗುವ ಮಕ್ಕಳ ಸಂಖ್ಯೆ ಇಳಿಮುಖವಾಗಿ, ಕ್ರಮೇಣ ಶೂನ್ಯವಾಗಲಿ ಎಂದ ಜಿಲ್ಲಾಧಿಕಾರಿಗಳು, ಆದರ್ಶ ಸಮಾಜದಲ್ಲಿ ಉತ್ತಮ ಸಂಸ್ಕಾರ, ಸಂಸ್ಕೃತಿ ಪಡೆದ ದಂಪತಿಗಳಿಂದ ಆದರ್ಶ ಮಕ್ಕಳು, ಕುಟುಂಬ, ಸಮಾಜವನ್ನು ಬೆಳಗುವಂತಾಗಲಿ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಈಶಣ್ಣ ಮುನವಳ್ಳಿ, ಉಮಾ ಈಶಣ್ಣ ಮುನವಳ್ಳಿ ದಂಪತಿಗಳು




ಸಂಸ್ಥೆಯಲ್ಲಿ ಪೋಷಣೆಗೊಂಡ ಮಗುವನ್ನು ಜಿಲ್ಲಾಧಿಕಾರಿಗಳಿಂದ ಪಡೆದು ಮಕ್ಕಳಿಲ್ಲದ ಕೇರಳದ ದಂಪತಿಗೆ ಹಸ್ತಾಂತರಿಸಿ ಮಗುವಿಗೆ ಹೂಮಾಲೆ ಹಾಕಿ ಶುಭ ಕೋರಿದರು.

ಮಗುವನ್ನು ದತ್ತು ಪಡೆದ ದಂಪತಿಗಳು ಮಗುವಿಗೆ ಸದೃಢ ಆರೋಗ್ಯ, ಉತ್ತಮ ಸಂಸ್ಕಾರ, ಸಂಸ್ಕೃತಿ, ಶಿಕ್ಷಣ ನೀಡಲಿ. ಭವಿಷ್ಯದಲ್ಲಿ ಮಗುವಿಗೆ ದತ್ತು ತಂದೆ-ತಾಯಿ ಎಂಬ ಭಾವನೆ ಬರದಂತೆ ತಮ್ಮ ರಕ್ತ ಹಂಚಿಕೊಂಡು ಬೆಳೆದ ಮಗುವೆಂದು ಭಾವಿಸಿ ಪ್ರೀತಿ, ಮಮತೆ, ಕಕ್ಕುಲತೆಯೊಂದಿಗೆ ಸಂಸಾರ ನಂದನವನದಂತೆ ಇರಲಿ ಎಂದು ಈಶಣ್ಣ ಮುನವಳ್ಳಿ ಶುಭ ಕೋರಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರ ದತ್ತು ಮಗು ಪಡೆಯುವ ಕ್ರಮಗಳನ್ನು ವಿವರಿಸಿದರು. ಮಂಜುನಾಥ ಚನ್ನಪ್ಪನವರ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ದತ್ತು ಸ್ವೀಕಾರ ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ ಸಂದರ್ಭೋಚಿತವಾಗಿ ಮಾತನಾಡಿದರು.

ಚೇತನ್ ಮೇರವಾಡೆ ಪ್ರಾರ್ಥಿಸಿದರು, ನಾಗವೇಣಿ ಕಟ್ಟಿಮನಿ ಸ್ವಾಗತಿಸಿದರು. ನರಸಿಂಹ ಕಾಮರ್ತಿ ನಿರೂಪಿಸಿದರು, ರಾಜೇಶ ಖಟವಟೆ ವಂದಿಸಿದರು. ಸಮಾರಂಭದಲ್ಲಿ ನಗರಸಭಾ ಸದಸ್ಯರಾದ ರಾಘವೇಂದ್ರ ಯಳವತ್ತಿ, ಮಾಧುಸಾ ಮೇರವಾಡೆ, ಜಯರಾಜ ಮುಳಗುಂದ, ಲುಕ್ಕಣಸಾ ರಾಜೋಳಿ, ಥಾಮಸ್ ಮ್ಯಾಚ್ಯು, ಲಲಿತಾಬಾಯಿ ಮೇರವಾಡೆ, ಉಮಾ ಚನ್ನಪ್ಪನವರ, ಪುಷ್ಪಾವತಿ ಕಾಮರ್ತಿ, ಶ್ರೀಧರ ಕಾಂಬಳೆ, ಪ್ರಮೋದ ಹಿರೇಮಠ ಮುಂತಾದವರಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಈಶಣ್ಣ ಮುನವಳ್ಳಿ, ಎಲ್ಲೋ ಜನ್ಮ ತಾಳಿದ ಮಗು ಎಲ್ಲೋ ಜೀವನ ರೂಪಿಸಿಕೊಳ್ಳುವದು ಮನ ಕಲಕುವ, ಮನ, ಮಾನವೀಯತೆ ಕಟ್ಟುವ ಸನ್ನಿವೇಶ. ತಂದೆ-ತಾಯಿಗೆ ಹಾತೊರೆಯುವ ಮಗು ಒಂದೆಡೆಯಾದರೆ, ಮಕ್ಕಳಿಲ್ಲದ ಚಿಂತೆಯಲ್ಲಿ ಕೊರಗುವ ದಂಪತಿ ಇನ್ನೊಂದೆಡೆ. ಮೂರು ಜೀವಾತ್ಮಗಳನ್ನು ಒಂದೆಡೆ ಬೆಸುಗೆಗೊಳಿಸುವ ಈ ಕಾರ್ಯ ನಿಜಕ್ಕೂ ಮಾನಸಿಕ ನೆಮ್ಮದಿ ನೀಡುವಂತದ್ದು, ಪುಣ್ಯ ಪ್ರಾಪ್ತಿಯಾಗುವಂತದ್ದು ಎಂದು ಅಭಿಪ್ರಾಯಪಟ್ಟರು.

# ಮಿತಿಮೀರಿದ ಪ್ರಾಣಿಗಳ ಉಪಟಳ: ಕ್ರಮಕ್ಕೆ ಒತ್ತಾಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಗೋವನಾಳ, ಗುಲಗಂಜಿಕೊಪ್ಪ ಗ್ರಾಮ ವ್ಯಾಪ್ತಿಯ ರೈತರ ಹೊಲಗಳಲ್ಲಿರುವ ಬೆಳೆಗಳಿಗೆ ಮುಳ್ಳುಹಂದಿ, ಚಿಗರಿ, ಮಂಗಗಳ ಕಾಟ ವಿಪರೀತವಾಗಿದ್ದು ಬೆಳೆ ರಕ್ಷಣೆಗೆ ಅರಣ್ಯ ಇಲಾಖೆ ಕ್ರಮ ಕೈಗೊಳ್ಳಬೇಕು ಎಂದು ಲಕ್ಷ್ಮೇಶ್ವರ ತಾಲೂಕು ಭಾರತೀಯ ಕಿಸಾನ್ ಸಂಘದ ಅಧ್ಯಕ್ಷ ಟಾಕಪ್ಪ ಸಾತಪುತೆ ನೇತೃತ್ವದಲ್ಲಿ ರೈತರು ಸೋಮವಾರ ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು.



ತಾಲೂಕಿನ ಗುಲಗಂಜಿಕೊಪ್ಪ ಗ್ರಾಮದಲ್ಲಿರುವ ರೈತರು ಬಿತ್ತನೆ ಮಾಡಿದ ಮೆಕ್ಕೆ ಜೋಳ, ಶೇಂಗಾ, ಹತ್ತಿ, ಮೆಣಸಿನಕಾಯಿ ಬೆಳೆಗಳನ್ನು ಮುಳ್ಳುಹಂದಿಗಳು, ಚಿಗರಿ, ಮಂಗಗಳು ಹಾಳು ಮಾಡುತ್ತಿವೆ. ಸಾವಿರಾರು ರೂ ಖರ್ಚು ಮಾಡಿ ಬಿತ್ತಿದ ಬೀಜಗಳನ್ನು ರಾತ್ರೋರಾತ್ರಿ ಭೂಮಿಯಿಂದ ಅಗೆದು ತಿಂದು ಸಸಿಗಳು ಹುಟ್ಟದಂತೆ ನಾಶಪಡಿಸುತ್ತಿವೆ. ಅಳಿದುಳಿದ ಮೊಳಕೆ ಸಸಿಗಳನ್ನು, ಚಿಗುರನ್ನೂ ಸಹ ತಿನ್ನುತ್ತಿವೆಯಾದ್ದರಿಂದ ರೈತರು ಸಂಕಷ್ಟಕ್ಕೀಡಾಗಿದ್ದಾರೆ. ಹಗಲು-ರಾತ್ರಿ ಎನ್ನದೇ ಕಾಯುತ್ತಿದ್ದರೂ ಕೂಡಾ ಇವುಗಳ ಕಾಟವು ತಪ್ಪುತ್ತಿಲ್ಲ. ಇನ್ನಾದರೂ ರೈತರ ಬಗ್ಗೆ ನಿರ್ಲಕ್ಷ ತೋರದೇ ರೈತರ ಕಷ್ಟಕ್ಕೆ ಸ್ಪಂದಿಸಬೇಕು ಮತ್ತು ಬೆಳೆಹಾನಿ ಪರಿಹಾರ ಕಲ್ಪಿಸಬೇಕು ಎಂದು ಮನವಿ ಪತ್ರದಲ್ಲಿ ಒತ್ತಾಯಿಸಿದ್ದಾರೆ.

ಗ್ರಾ.ಪಂ ಅಧ್ಯಕ್ಷ ಮಂಜನಗೌಡ ಕೆಂಚನಗೌಡ್ರ, ರೈತರಾದ ಎನ್.ಎಸ್. ಪಾಟೀಲ, ಅಣ್ಣಪ್ಪ ರಾಮಗೇರಿ, ನಿಂಗನಗೌಡ ಪಾಟೀಲ, ನಿಂಗಪ್ಪ ಶಿವಬಸಣ್ಣವರ, ಸೋಮನಗೌಡ ಕೊರಡೂರ, ಚಂದ್ರಗೌಡ ಕರೆಗೌಡ್ರ, ಕರಿಯಪ್ಪಗೌಡ್ರ ಹೊಸಗೌಡ್ರ, ವಸಂತಗೌಡ ಕರೆಗೌಡ್ರ, ಬಿ.ಎನ್. ರೊಟ್ಟಿಗವಾಡ, ಬಸವರಾಜ ಕುರುಬರ, ಗಂಗಾಧರ ಮಾದರ, ಮಂಜು ಮಾದರ, ರಮೇಶ ಧೂಳಮ್ಮನವರ, ನಿಂಗಪ್ಪ ತಿಮ್ಮಾಪುರ, ದಿಳ್ಳಪ್ಪ ಉಳ್ಳಟ್ಟಿ, ಸಿದ್ದಪ್ಪ ಹೊಸಮನಿ, ನಾಗರಾಜ ಪಾಟೀಲ, ಮಾಲತೇಶ ಪಾಟೀಲ, ಮಾಂತೇಶ ಬಮ್ಮನಕಟ್ಟಿ ಮುಂತಾದವರಿದ್ದರು.

# ಅಕ್ರಮ ಗಣಿಗಾರಿಕೆ: ಇರ್ಫಾನ್ ಗಡಿಪಾರು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಲಕ್ಷ್ಮೇಶ್ವರ ಪೊಲೀಸ್ ಠಾಣಾ ವ್ಯಾಪ್ತಿಯ ಲಕ್ಷ್ಮೇಶ್ವರ ಶಹರದ ಗಡ್ಡಯ್ಯನಗರ ನಿವಾಸಿ, ಆಟೋ ಚಾಲಕ

ಇರ್ಫಾನ್ ತಂದೆ ಮಲೀಕಸಾಬ ತಹಶೀಲ್ದಾರ (31) ಈತನು ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿದ್ದರಿಂದ ಐಪಿಸಿ ಮತ್ತು ಪಿಎಎನ್ ಎಸ್‌ಸಿ/ ಎಸ್.ಟಿ ಆ್ಯಕ್ಟ್ -1989 ಮತ್ತು ಪಿಡಿಪಿಪಿ ಆ್ಯಕ್ಟ್ ಹಾಗೂ ಐ.ಟಿ. ಕೆಪಿ ಆ್ಯಕ್ಟ್ ಮತ್ತು ಸಿಆರ್‌ಪಿಸಿ ಅಡಿಯಲ್ಲಿ ಅಪರಾಧ ಮಾಡುವಲ್ಲಿ ತೊಡಗಿದ್ದು, ಹಾಗೂ ಇದೇ ಪ್ರವೃತ್ತಿಯನ್ನು ಮುಂದುವರೆಸಿಕೊಂಡು ಹೋಗುವ ಸಂಭವ ಇದೆಯೆಂದು ವಿಚಾರಣೆ ಕಾಲಕ್ಕೆ ಸಾಬೀತಾಗಿರುವುದರಿಂದ ಆರೋಪಿ ಇರ್ಫಾನ್, ಗದಗ ಉಪವಿಭಾಗದ ಸರಹದ್ದಿನಿಂದ ಮೇ 31 ರಿಂದ ಜೂನ್ 14 ( 15 ದಿನಗಳ ಅವಧಿಗೆ) ಕಲ್ಬುರ್ಗಿ ಜಿಲ್ಲೆಯ ಫರಹತಾಬಾದ್ ಪೊಲೀಸ್ ಠಾಣೆಯಲ್ಲಿ ಹಾಜರಿ ಹಾಕುವ ಷರತ್ತಿಗೊಳಪಟ್ಟು ಗಡಿಪಾರು ಮಾಡಿ ಉಪವಿಭಾಗಾಧಿಕಾರಿ ಡಾ.ಎಸ್.ವೆಂಕಟೇಶ ನಾಯ್ಕ್ ಆದೇಶಿಸಿದ್ದಾರೆ.



ಡಾ. ಆರ್.ಎಸ್. ದಾನರಡ್ಡಿ ಅವರು ಪಿ.ಪಿ.ಜಿ. ಕಲಾ ಮಹಾವಿದ್ಯಾಲಯದ ನೂತನ ಪ್ರಾಂಶುಪಾಲರಾಗಿ ಆಯ್ಕೆ ಆಗಿದ್ದಕ್ಕೆ ಡಾ. ಎಂ.ಎಂ. ಕಲಬುರ್ಗಿ ಸಂಶೋಧನಾ ಕೇಂದ್ರದ ಅಧ್ಯಕ್ಷರಾದ ಡಾ. ಕೆ. ರವೀಂದ್ರನಾಥ, ಸಂಯೋಜನಾಧಿಕಾರಿ ಡಾ. ಅರ್ಜುನ ಗೊಳಸಂಗಿ ಅವರು ಶಾಲು ಹೊದಿಸಿ ಗೌರವಿಸಿದರು. ಮಾರ್ಗದರ್ಶಕರು ಮತ್ತು ಸಂಶೋಧನ ಕೇಂದ್ರದ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕುರುಬ ಸಮಾಜದಿಂದ ವಿದ್ಯಾರ್ಥಿಗಳಿಗೆ ಪುರಸ್ಕಾರ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ನಾಗರಮಡುವು ಗ್ರಾಮದಲ್ಲಿ 2023-24ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೇ.75ಕ್ಕಿಂತ ಹೆಚ್ಚಿನ ಅಂಕ ಗಳಿಸಿದ 100 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಹಾಗೂ ಪುರಸ್ಕಾರ ಕಾರ್ಯಕ್ರಮ ನಡೆಯಿತು.

ಸಾನ್ನಿಧ್ಯವನ್ನು ಚಿನ್ನಯ ಸ್ವಾಮಿ ಅಮೋಘಿಮಠ ವಹಿಸಿದ್ದರು. ಶೋಷಿತ ಸಮುದಾಯಗಳ ಒಕ್ಕೂಟದ ಅಧ್ಯಕ್ಷ ಕೆ.ರಾಮಚಂದ್ರಪ್ಪ ಕಾರ್ಯಕ್ರಮ ಉದ್ಘಾಟಿಸಿದರು. ಕರ್ನಾಟಕ ಪ್ರದೇಶ ಕುರುಬ ಸಂಘದ ಪ್ರ.ಕಾ. ಸೋಮಶೇಖರ, ತಾಲೂಕಾಧ್ಯಕ್ಷ ಹೊನ್ನಪ್ಪ ಪೋಟಿ,



ಮಹೇಶ ಹಾರೋಗೇರಿ, ಪ್ರಕಾಶ ಬಣಕಾರ, ಫಕ್ಕೀರಪ್ಪ ಹೆಬಸೂರ, ಶಶಿಧರ ರೊಳ್ಳಿ, ಮಾಜಿ ಶಾಸಕ ರಾಮಕೃಣ ದೊಡ್ಡಮನಿ, ರಾಮಣ್ಣ ಲಮಾಣಿ, ಹುಮಾಯೂನ್ ಮಾಗಡಿ, ಮಂಜುನಾಥ ಘಂಟಿ, ಮೈಲಾರೆಪ್ಪ ಹಾದಿಮನಿ, ಆನಂದ ಮಾಳೇಕೊಪ್ಪ, ಸುರೇಶ ತಳ್ಳಳ್ಳಿ, ಶಂಕರ ಭಾವಿ, ದೇವಪ್ಪ ಬಟ್ಟೂರ, ಶೇಖಣ್ಣ ಕಾಳೆ, ಈಶ್ವರಪ್ಪ ಹೊನ್ನಪ್ಪನವರ, ಡಿ.ಕೆ. ಹೊನ್ನಪ್ಪನವರ, ಜಡಿಯಪ್ಪ ಹೊನ್ನಪ್ಪನವರ, ವಸಂತ ಜಗ್ಗಲರ, ಮಹೇಂದ್ರ ಉಡಚಣ್ಣವರ, ಯಲ್ಲಪ್ಪ ಸೂರಣಗಿ, ತಿಪ್ಪಣ್ಣ ಸಂಶಿ, ರಾಜು ಮಡಿವಾಳರ, ಅಣ್ಣಪ್ಪ ರಾಮಗೇರಿ, ಪ್ರಕಾಶ ಹೋರಿ, ಈರಣ್ಣ ಆನೆಪ್ಪನವರ, ಪ್ರಕಾಶ ಆನೆಪ್ಪನವರ, ಮುತ್ತಣ್ಣ ಚವಥಾಳ, ಮಲ್ಲಪ್ಪ ಆನೆಪ್ಪನವರ, ಜಗದೀಶ ತಳ್ಳಳ್ಳಿ, ಚನ್ನಮ್ಮ ಹುಳಕಣ್ಣವರ, ಹನುಮಂತ ಗೊಜನೂರ, ಮಂಜಪ್ಪ ಹಮ್ಮಿಗಿ, ನೀಲಪ್ಪ ಬೂದಿಹಾಳ, ಮಹೇಶ ಹುರಕಣ್ಣವರ, ಶಂಕರಪ್ಪ ಸುಗ್ನಳ್ಳಿ, ಹನುಮಂತ ಬಟ್ಟೂರ, ಬೊಂಬಾಟ ಬಸಣ್ಣ, ವೆಂಕಟೇಶ, ಹಾಲನಗೌಡ ಪಾಟೀಲ, ಆನಂದ ಮಾಳೇಕೊಪ್ಪ ಉಪಸ್ಥಿತರಿದ್ದರು.

# ದೇವಸ್ಥಾನಗಳು ಶಕ್ತಿ ಕೇಂದ್ರಗಳಾಗಲಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶ್ರೇಷ್ಠ ಸಂತ ಶ್ರೀ ಚಿದಂಬರೇಶ್ವರರು ಜನರಲ್ಲಿ ಜಾತಿ-ಮತ ಪಂಥಗಳನ್ನು ಬದಿಗಿಟ್ಟು ಭಕ್ತಿ ಮಾರ್ಗದೆಡೆಗೆ ಸಾಗುವಂತೆ ಮಾಡಿದ ಮಹಿಮಾಪುರುಷರಾಗಿದ್ದರು. ಈಶ್ವರನ ಪರಮಾವತಾರಿ ಚಿದಂಬರೇಶ್ವರರು ಸ್ವತಃ ಈ ಊರಿಗೆ ಬಂದು ಈಶ್ವರರನ್ನು ಸ್ಥಾಪಿಸಿರುವದು ಈ ಸ್ಥಳದ ಮಹಿಮೆಗೆ ಸಾಕ್ಷಿಯಾಗಿದೆ ಎಂದು ಅಗಡಿ ಆನಂದವನದ ಶ್ರೀ ಶ್ರೀಧರ ಚಕ್ರವರ್ತಿಗಳು ನುಡಿದರು.

ಅವರು ಪಟ್ಟಣದ ಹಿರೇಬಣದಲ್ಲಿ ಕಳೆದ ವರ್ಷ ಜೀರ್ಣೋದ್ಧಾರಗೊಂಡು ಮರುನಿರ್ಮಾಣಗೊಂಡಿರುವ ಶ್ರೀ ಚಿದಂಬರೇಶ್ವರ ದೇವಸ್ಥಾನದ ವಾರ್ಷಿಕೋತ್ಸವದ ನಿಮಿತ್ತ ವಿಶೇಷ ಪೂಜೆ ಹಾಗೂ ಸಮಾಜದ ಹಿರಿಯರು ಮತ್ತು ಸೇವಾಕರ್ತರಿಗೆ ಹಮ್ಮಿಕೊಳ್ಳಲಾಗಿದ್ದ ಸನ್ಮಾನ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿ ಮಾತನಾಡಿದರು.

ದೇವಸ್ಥಾನಗಳ ನಿರ್ಮಾಣ ಸುಲಭವಾಗಬಹುದು, ಆದರೆ ಅಲ್ಲಿ ಸ್ವಚ್ಛತೆ, ಭಕ್ತಿಯ ವಾತಾವರಣ ನಿರ್ಮಾಣ ಮಾಡುವದು ಹೆಚ್ಚು ಅವಶ್ಯವಾಗಿದೆ. ದೇವಸ್ಥಾನಗಳು ಭಕ್ತರನ್ನು ಸೆಳೆಯುವ ಶಕ್ತಿ ಕೇಂದ್ರಗಳಾಗಿ ಬೆಳಗಬೇಕು. ಅಂತಹ ಶಕ್ತಿ ಇಲ್ಲಿನ ಚಿದಂಬರೇಶ್ವರ ದೇವಸ್ಥಾನದಲ್ಲಿದೆ ಎಂದು ನುಡಿದರು.

ಚಿದಂಬರ ಟ್ರಸ್ಟ್‌ನ ಅಧ್ಯಕ್ಷ ಪ್ರಕಾಶ ಕುಲಕರ್ಣಿ ಅಧ್ಯಕ್ಷತೆ ವಹಿಸಿ ಮಾತನಾಡಿ, ದೇವಸ್ಥಾನ ಜೀರ್ಣೋದ್ಧಾರ ಕಾರ್ಯಕ್ಕೆ ಇಲ್ಲಿನ ಎಲ್ಲ ಸಮಾಜಗಳ ಜನರು ತನು, ಮನ, ಧನದಿಂದ ಸಹಕಾರ ಸಲ್ಲಿಸಿರುವದನ್ನು ಟ್ರಸ್ಟ್ ಸದಾ ಸ್ಮರಿಸುತ್ತದೆ ಎಂದರು.

ನೂರಾರು ಜನರು ಆಗಮಿಸಿ ದೇವರ ದರ್ಶನ ಪಡೆದು ಧಾರ್ಮಿಕ ಕಾರ್ಯಕ್ರಮಗಳನ್ನು ವೀಕ್ಷಿಸಿದರು. ನಂತರ ಶ್ರೀ ಶಂಕರ ಭಾರತಿ ಮಠದ ಸಮುದಾಯ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ದೇವಸ್ಥಾನ ನಿರ್ಮಾಣ ಕಾರ್ಯದಲ್ಲಿ ಸಹಕಾರ ನೀಡಿದವರನ್ನು ಮತ್ತು ಹಿರಿಯರನ್ನು ಗೌರವಿಸಲಾಯಿತು.

ವೇದಿಕೆಯಲ್ಲಿ ನಾರಾಯಣಭಟ್ ಪುರಾಣಿಕ, ವಿ.ಎಲ್. ಪೂಜಾರ, ಕೆ.ಎಸ್. ಕುಲಕರ್ಣಿ, ಪ್ರಸನ್ನ ಜೋಶಿ, ಚಿಕ್ಕಣ್ಣ ಜೋಶಿ, ಎ.ಪಿ. ಕುಲಕರ್ಣಿ, ಡಾ. ಪ್ರಸನ್ನ ಕುಲಕರ್ಣಿ, ರಾಜಾಚಾರ್ಯ ರಾಯಚೂರ, ನಾಗರಾಜ ಪೂಜಾರ, ಮಂಜುನಾಥ ಸದಾವರ್ತಿ ಮುಂತಾದವರು ಉಪಸ್ಥಿತರಿದ್ದರು. ಟ್ರಸ್ಟ್‌ನ ಪ್ರಸನ್ನ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಿ.ಎಂ. ಪೂಜಾರ ನಿರ್ವಹಿಸಿದರು.

# ಗುಣಮಟ್ಟದ ಶಿಕ್ಷಣದಿಂದಲೇ ಉನ್ನತಿ



■ ವಿಜಯಸಾಕ್ಷಿ ಸುದ್ದಿ, ರೋಣ

ವಿದ್ಯಾರ್ಥಿಗಳು ಅಕ್ಷರ ಜ್ಞಾನವನ್ನು ಪಡೆಯುವ ಮೂಲಕ ಗ್ರಾಮದ ಕೀರ್ತಿಯನ್ನು ಹೆಚ್ಚಿಸಬೇಕು ಎಂದು ಎಸ್‌ಡಿಎಂಸಿ ಅಧ್ಯಕ್ಷ ಕೂಡ್ಲೇಪ್ಪ ಹಡಪದ ಹೇಳಿದರು.

ಅವರು ಸೋಮವಾರ ಮಾರನಬಸರಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಮಕ್ಕಳಿಗೆ ಸಮವಸ್ತ್ರ ವಿತರಿಸಿ ಮಾತನಾಡಿದರು.

ಸ್ಪರ್ಧಾತ್ಮಕ ಯುಗದಲ್ಲಿ ಅಕ್ಷರ ಜ್ಞಾನಕ್ಕೆ ಮಹತ್ವವಿದೆ ಎಂಬುದನ್ನು ವಿದ್ಯಾರ್ಥಿಗಳು ಹಾಗೂ ಪಾಲಕರು ತಿಳಿದುಕೊಳ್ಳುವುದು ಅವಶ್ಯಕವಾಗಿದೆ. ಅಲ್ಲದೆ ಗುಣಮಟ್ಟದ ಶಿಕ್ಷಣ ಪಡೆದಾಗ ಮಾತ್ರ ಸಮಾಜದಲ್ಲಿ ಉತ್ತಮ ನಾಗರಿಕನಾಗಿ ಬಾಳಲು ಸಾಧ್ಯ ಎಂದರು.

ಬಸವರಾಜ ಮಾರನಬಸರಿ ಮಾತನಾಡಿ, ಸದೃಢ ನಾಡು ಕಟ್ಟಲು ಹಾಗೂ ಸಮಾಜದ ಗ್ರಾಮದ ಕೀರ್ತಿಯನ್ನು ಹೆಚ್ಚಿಸಲು ವಿದ್ಯಾರ್ಥಿಗಳು ಅಕ್ಷರ ಜ್ಞಾನ ಹೊಂದುವುದು ಅವಶ್ಯಕವಾಗಿದೆ. ವಿದ್ಯಾರ್ಥಿಗಳು ಅಕ್ಷರ ಜ್ಞಾನದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಸರಕಾರ ಅನೇಕ ಸೌಲಭ್ಯಗಳನ್ನು ಒದಗಿಸುತ್ತಿದೆ. ವಿದ್ಯಾರ್ಥಿಗಳು ಮತ್ತು ಪಾಲಕರು ಸರಕಾರ ನೀಡುವ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಸಮಾಜ ಜೊತೆಗೆ ಸಮುದಾಯದ ಉನ್ನತಿಗೆ ಶ್ರಮಿಸಬೇಕು ಎಂದರು.

ಈ ಸಂದರ್ಭದಲ್ಲಿ ಮುತ್ತಪ್ಪ ಬಾರಕೇರ, ಅನಿತಾ ಪತ್ತಾರ, ಕವಿತಾ ಹಿರೇಮಠ, ಶರಣಮ್ಮ ಡಂಬಳ, ಅನ್ನಪೂರ್ಣ ಗಡಾದ, ಎಸ್.ಇ. ಹೊರಪೇಟಿ, ಎಫ್.ಬಿ. ಮಾದರ, ಜೆ.ಜಾನಪಾಲ್, ಎಂ.ಕೆ. ಸರ್ವಿ, ಎಸ್.ಎಸ್. ಅವಟಿ, ಬಿ.ಎಸ್. ಗುಗ್ಗರಿ, ಎಂ.ಜಿ. ಮಕಾನದಾರ, ಬಿ.ಎಫ್. ಚೌಡಕಿ ಮುಂತಾದವರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka